ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 23

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಸೋಮವಾರ: 29-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಸಮಾಜ ಒಡೆಯುವುದೇ ಬಿಜೆಪಿ ಸಾಧನೆ



**ಬೆಂಗಳೂರು, ಡಿ. 28–** ದೇಶ ಮತ್ತು ಸವಾಜವನ್ನು ಒಡೆಯುವುದೇ ಬಿಜೆಪಿ ಸಾಧನೆ ಮತ್ತು ಕೆಲಸ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಈ ದೇಶಕ್ಕೆ ಬಿಜೆಪಿಯ ಕೊಡುಗೆ ಏನಿಲ್ಲ. ದೇಶ ಹಾಗೂ ಸಮಾಜ ಒಡೆಯುವುದೇ ಇವರ ಸಾಧನೆ, ಕೆಲಸ ಎಂದು ಟೀಕಿಸಿದರು.

ದೇಶದಲ್ಲಿ ಜಾತಿ ವ್ಯವಸ್ಥೆ ಹುಟ್ಟು ಹಾಕಿದ್ದೇ ಮನವಾದಿಗಳು. ಚಾತುರ್ವರ್ಣ ವ್ಯವಸ್ಥೆಯನ್ನು ರೂಪಿಸಿದ್ದೇ ಮನುಸ್ಮತಿ. ಇದನ್ನೇ ಬಿಜೆಪಿಯವರು ಪಾಲಿಸುತ್ತಿದ್ದಾರೆ. ದೇಶಕ್ಕೆ ಬಿಜೆಪಿಯವರ ಕೊಡುಗೆ ಏನೂ ಇಲ್ಲ ಎಂದರು.

ಬಿಜೆಪಿಯ ಮೂಲ ಬೇರಾದ ಆರ್‌ಎಸ್‌ಎಸ್ ಸಹ ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಲಿಲ್ಲ. ಸ್ವಾತಂತ್ರ್ಯ ಸಂಗ್ರಾಮದ ಸಂದರ್ಭದಲ್ಲಿ ಆರ್‌ಎಸ್‌ಎಸ್‌ನವರು ಬ್ರಿಟೀಷರ ಜತೆ ಸೇರಿಕೊಂಡಿದ್ದರು. ಕ್ವಿಟ್ ಇಂಡಿಯಾ ಚಳವಳಿ, ಅಸಹಕಾರ ಚಳವಳಿ ಯಾವುದೇ ಚಳವಳಿಯಲ್ಲಿ ಆರ್‌ಎಸ್‌ಎಸ್‌ನವರು ಭಾಗಿಯಾಗಲಿಲ್ಲ ಎಂದರು.

ಈಗ ಆರ್‌ಎಸ್‌ಎಸ್‌ನವರು ರಾಷ್ಟ್ರಭಕ್ತಿ ಬಗ್ಗೆ ಮಾತನಾಡುತ್ತಾರೆ. ಉದ್ದುದ್ದ ಭಾಷಣ ಹೊಡೆಯುತ್ತಾರೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಇವರು ಭಾಗವಹಿಸಲಿಲ್ಲ. ಮಹಾತ್ಮಗಾಂಧೀಜಿಯವರನ್ನು ಕೊಂದಿದ್ದೇ ಆರ್‌ಎಸ್‌ಎಸ್‌ನ ನಾತುರಾಮ್ ಗೋಡ್ಸೆ ಎಂದು ಹೇಳಿದರು.ಆರ್‌ಎಸ್‌ಎಸ್‌ನವರು ಮೊದಲಿನಿಂದಲೂ ಮಹಾತ್ಮಗಾಂಧಿಯನ್ನು ದ್ವೇಷಿಸುತ್ತಿದ್ದರು. ಈಗಲೂ ಕೇಂದ್ರ ಸರ್ಕಾರ ದ್ವೇಷ ಮಾಡಲು ಶುರು ಮಾಡಿದೆ. ನರೇಗಾ ಯೋಜನೆಯಿಂದ ಮಹಾತ್ಮಗಾಂಧೀಜಿ ಹೆಸರನ್ನು ಕೈ ಬಿಟ್ಟಿದೆ.

ಇವರು ದೇಶ ಭಕ್ತರ ಎಂದು ಹರಿಹಾಯ್ದರು. ನಾನು ಆರ್‌ಎಸ್‌ಎಸ್‌ನವರನ್ನು ಡಕಾಯಿತರು ಎಂದು ಕರೆಯಲು ಹೋಗಲ್ಲ. ಆದರೆ ಅವರು ದೇಶಭಕ್ತರಂತೂ ಅಲ್ಲ. ಇಷ್ಟು ಮಾತ್ರ ಹೇಳುತ್ತೇನೆ ಎಂದರು.ಆರ್‌ಎಸ್‌ಎಸ್‌ನವರಿಗೆ ದೇಶಕ್ಕೆ ಸ್ವಾತಂತ್ರ್ಯ ಬರುವುದು ಇಷ್ಟವಿರಲಿಲ್ಲ ಎಂದು ಅವರು ಹೇಳಿದರು.

ಆಧುನಿಕ ಭಾರತದ ರೂವಾರಿ ಜವಾಹರ್ ಲಾಲ್ ನೆಹರು. ದೇಶಕ್ಕೆ ಜೈಜವಾನ್ ಜೈ ಕಿಸಾನ್ ಮಂತ್ರ ಕೊಟ್ಟವರು ಲಾಲ್ ಬಹದ್ದೂರ್ ಶಾಸ್ತ್ರಿ. ಸಾಮಾಜಿಕ ನ್ಯಾಯದ ರೂವಾರಿ ಇಂದಿರಾಗಾಂಧಿ. ಗರಿಬಿ ಹಟಾವೋ ಎಂಬ ಘೋಷಣೆ ನೀಡಿದವರು ಇಂದಿರಾಗಾಂಧಿ. ದೇಶದಲ್ಲಿ ಆಹಾವ ಸ್ವಾವಲಂಬನೆಗೆ ಕಾರಣವಾದ ಹಸಿರುಕ್ರಾಂತಿಯನ್ನು ತಂದವರು ಇಂದಿರಾಗಾಂಧಿ, ಜಗಜೀವನರಾಮ್ ಅವರು ಎಂದರು.

ದೇಶವನ್ನು 21ನೇ ಶತಮಾನಕ್ಕೆ ಮುನ್ನಡೆಸಿದವರು ರಾಜೀವ್‌ಗಾಂಧಿ. ಹೀಗಿರುವಾಗ ದೇಶಕ್ಕೆ ಬಿಜೆಪಿಯವರ ಕೊಡುಗೆ ಏನು. ಬಿಜೆಪಿಗೆ ಸೇರಿದ ವಾಜಪೇಯಿ ಇವರೆಲ್ಲಾ ಪ್ರಧಾನಿಯಾಗಿರಬಹುದು ಅಷ್ಟೇ. ಆದರೆ ದೇಶಕ್ಕೆ ಹೆಚ್ಚಿನ ಕೊಡುಗೆ ನೀಡಿದ್ದು ಕಾಂಗ್ರೆಸ್. ನಾವು ಕಾಂಗ್ರೆಸ್ಸಿಗರು ಎಂಬುದು ಹೆಮ್ಮೆಯ ವಿಚಾರ ಎಂದರು.ದೇಶದ ಜನರಿಗೆ ಸಮಾನ ಅವಕಾಶ ಬಂದದ್ದು ಸಂವಿಧಾನ ರಚನೆಯಾದ ಮೇಲೆ. ಬಾಬಾ ಸಾಹೇಬ್ ಅಂಬೇಡ್ಕರ್ ರವರು ಜಾತಿ ವ್ಯವಸ್ಥೆಯ ಅಸಮಾನತೆಯನ್ನು ತೊಲಗಿಸಲು ಸಂವಿಧಾನ ಜಾರಿ ಮಾಡಿದರು. ಭಾರತದ ಪ್ರಜಾಪ್ರಭುತ್ವ, ಸಾಮಾಜಿಕ ತಳಹದಿಯ 2ನೇಪುಟಕ್ಕೆ►

### ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ಪತ್ರಕರ್ತರಿಗೆ ಪ್ರಶಸ್ತಿ ಪ್ರದಾನ

## ಪತ್ರಕರ್ತರು ಸಮಾಜಮುಖಿಯಾಗಿ ಯೋಚಿಸಲಿ: ಎನ್.ಎಸ್.ಬೋಸರಾಜು ಸಲಹೆ

ಧೈರ್ಯದ ದಾರಿ

**ರಾಯಚೂರು,ಡಿ.28–**ಜನರು ಪ್ರತಿನಿತ್ಯ ಮಾಧ್ಯಮಗಳನ್ನು ಮತ್ತು ಪತ್ರಕರ್ತರನ್ನು ಗಮನಿಸುತ್ತಾರೆ. ಸಮಾಜ ಸುಧಾರಣೆಯಲ್ಲಿ ಪತ್ರಕರ್ತರ ಪಾತ್ರವು ಸಹ ಮಹತ್ವದ್ದಾಗಿದ್ದು, ಹಾಗಾಗಿ ಜನರು ತಮ್ಮ ಮೇಲಿಟ್ಟಿರುವ ನಂಬಿಕೆಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪತ್ರಕರ್ತರು ಸಮಾಜಮುಖಿಯಾಗಿ ಯೋಚಿಸಬೇಕು, ಕರ್ತವ್ಯ ನಿರ್ವಹಿಸಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಡಿಸೆಂಬರ್ 28ರ ಭಾನುವಾರ ದಂದು ರಾಯಚೂರು ರಿಪೋರ್ಟರ್ಸ್ ಗಿಲ್ಡ್, ಜಿಲ್ಲಾ ಮತ್ತು ಪ್ರಾದೇಶಿಕ ದಿನ ಪತ್ರಿಕೆಗಳ ಸಂಪಾದಕರ ಸಂಘ ರಾಯಚೂರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸವಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ವತಂತ್ರ ಪೂರ್ವದಲ್ಲಿ ಪತ್ರಿಕೆಗಳನ್ನು ನಡೆಸುವುದು ಕಷ್ಟವಾಗಿತ್ತು ಎಂಬುದನ್ನು ನಾವು ತಿಳಿದಿದ್ದೇವೆ. ಅಂತಹ ಪರಿಸ್ಥಿತಿ ಈಗಲೂ ಇದೆ ಎಂಬುದನ್ನು ಅರಿತು ರಾಜ್ಯ ಸರ್ಕಾರವು ಪತ್ರಕರ್ತರಿಗಾಗಿ ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ ಎಂದು ತಿಳಿಸಿದರು.

ರಾಯಚೂರು ಇತಿಹಾಸ ಗಮನಿಸಿದಾಗ ಸುದ್ದಿ ಮೂಲ, ರಾಯಚೂರು ವಾಣಿಯಂತಹ ಅನೇಕ ಪತ್ರಿಕೆಗಳು ಸಂಕಷ್ಟದ ಸ್ಥಿತಿಯಲ್ಲೂ ಉತ್ತಮವಾಗಿ ಪ್ರಕಟವಾಗಿ ಜಿಲ್ಲೆಯ ಅನೇಕ ಪತ್ರಕರ್ತರಿಗೆ ವೃತ್ತಿ ಬುನಾದಿಯನ್ನು ನೀಡಿವೆ. ಈ ಪತ್ರಿಕೆಗಳಿಂದ ಅನೇಕರು ಪತ್ರಕರ್ತರಾಗಿ ಹೊರಹೊಮ್ಮಿದ್ದನ್ನು ನೋಡಬ ಹುದಾಗಿದೆ. ಈ ಪತ್ರಿಕೆಗಳು ನಮಗೆ ಮಾರ್ಗದರ್ಶನ ಮಾಡಿವೆ. ಸಮಸ್ಯೆಯನ್ನು ಯಾವ ರೀತಿ ಬಗೆಹರಿಸಬೇಕೆಂದು ಸಲಹೆಗಳನ್ನು ನೀಡಿವೆ ಎಂದು ಸಚಿವರು ತಿಳಿಸಿದರು. ಜಿಲ್ಲೆಯ ಎಲ್ಲಾ ಪತ್ರಕರ್ತರು ನಮ್ಮೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಇಲ್ಲಿನ ಪತ್ರಕರ್ತರ ಬೇಡಿಕೆಯಂತೆ ಈಗಾಗಲೆ ಹೊಸ ಬಸ್ ನೀಡಿದ್ದೇವೆ. ಪತ್ರಕರ್ತರಿಗಾಗಿ ಪತ್ರಿಕಾ ಭವನದ ಸೌಕರ್ಯ ಕಲ್ಪಿಸಿದ್ದೇವೆ. ನಂತರ



ಎರಡನೇ ಮಹಡಿ ನಿರ್ಮಾಣಕ್ಕೆ ಸಹ ಅನುದಾನ ನೀಡಿದ್ದೇವೆ. ಮುಂದೆಯೂ ನೀಡುತ್ತೇವೆ ಎಂದು ಸಚಿವರು ತಿಳಿಸಿದರು.

ಕೆಲವು ಮಾಧ್ಯಮ ಸಂಸ್ಥೆಗಳು ದೊಡ್ಡ ದೊಡ್ಡ ಉದ್ಯಮಿಗಳ ಕೈ ಸೇರಿವೆ. ಕೆಲವು ಮಾಧ್ಯಮಗಳು ಉದ್ಯಮ ರೂಪ ಪಡೆದು ಕೊಂಡಿದ್ದು ಈ ಮಧ್ಯೆಯೇ ಪತ್ರಕರ್ತರು ತಮ್ಮ ವೃತ್ತಿಗೆ ನಿಷ್ಠರಾಗಿ ನಡೆಯಬೇಕು. ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕು. ಪತ್ರಕರ್ತರ ಪರಿಸ್ಥಿತಿ ಕಠಿಣವಾಗಿದ್ದರು ಸಹ ಇಲ್ಲಿನ ವರದಿಗಾರರು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಗ್ರಾಮೀಣ ಭಾಗದಲ್ಲಿನ ಪತ್ರಕರ್ತರು ಸಹ ನಿಷ್ಠಾವಂತರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ರಾಯಚೂರು ಜಿಲ್ಲೆಯ ಎಲ್ಲ ಪತ್ರಕರ್ತರ ಮೇಲೆ ನಮಗೆ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

ಈ ವೇಳೆ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಶಾಸಕಾಂಗ, ಕಾರ್ಯಾಂಗವನ್ನು ಕೆಲವೊಮ್ಮೆ ತಿದ್ದಿ ಸರಿಪಡಿಸುವ ಪತ್ರಿಕಾರಂಗದ ಇತಿಹಾಸ ಅತ್ಯಂತ ಅನನ್ಯವಾಗಿದೆ. ಮಹತ್ವದ 2ನೇಪುಟಕ್ಕೆ►

## ಹೊಸ ವರ್ಷಾಚರಣೆ: ಕಟ್ಟೆಚ್ಚರ



**ಬೆಂಗಳೂರು,ಡಿ.28–**ಹೊಸ ವರ್ಷದ ಸಂಭ್ರಮಾಚರಣೆ ವೇಳೆ ನಗರದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಅಭೂತಪೂರ್ವ ಭದ್ರತೆಯನ್ನು ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಡಾ.ಪರಮೇಶ್ವರ್ ಅವರು ತಿಳಿಸಿದ್ದಾರೆ.

ನಗರದ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ದೊಡ್ಡ ಪ್ರಮಾಣದಲ್ಲಿ ಜನ ಸೇರುವ ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಪಬ್‌ಗಳು, ರೆಸ್ಟೋರೆಂಟ್‌ಗಳಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಭದ್ರತೆಯನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ನಗರದ 20 ಸಾವಿರ ಪೊಲೀಸ್ ಅಧಿಕಾರಿ ಸಿಬ್ಬಂದಿ ಹೊರತುಪಡಿಸಿ ರಾಜ್ಯ ಮೀಸಲು ಪಡೆ ಜೊತೆಗೆ ಹೊರ ಜಿಲ್ಲೆಗಳಿಂದಲೂ ಅಗತ್ಯಬಿದ್ದರೆ ಸಿಬ್ಬಂದಿಯನ್ನು ಕರೆಸಿಕೊಳ್ಳಲಾಗುವುದು, ಕೇಂದ್ರ ವಿಭಾಗ, ಪೂರ್ವ ವಿಭಾಗ, ಆಗ್ನೇಯ ವಿಭಾಗ ಗಳಲ್ಲಿ ಹೆಚ್ಚಿನ ಜನಸಂಖ್ಯೆ ಸೇರುವ ಮಾಹಿತಿಯನ್ನು ಆಧರಿಸಿ ಭದ್ರತೆಯನ್ನು ಬಿಗಿಗೊಳಿಸಲಾಗುವುದು ಎಂದು ಹೇಳಿದರು.ಹೊಸವರ್ಷದ ಡಿ. 31ರ ರಾತ್ರಿ 8 ರಿಂದ ಮುಂಜಾನೆಯವರೆಗೆ ನಗರ ಎಲ್ಲೆಡೆ ಭದ್ರತೆಯನ್ನು ಕೈಗೊಂಡು ವಾಹನಗಳ ತಪಾಸಣೆ ಚುರುಕುಗೊಳಿಸಲಾಗುವುದು ಬಾಂಬ್ ನಿಷ್ಕ್ರಿಯ ಪಡೆ, ಶ್ವಾನದಳ, ಸಂಚಾರಿ ಪೊಲೀಸರು, ನಗರ ಸಶಸ್ತ್ರ ಪಡೆ, ಹೋಂ ಗಾರ್ಡ್ಸ್ ಗಳನ್ನು ಭದ್ರತೆಗೆ ಬಳಸಲಾಗುವುದು ಎಂದು ತಿಳಿಸಿದರು.

ನಗರದ ಎಲ್ಲಾ ಮೇಲ್ಸೇತುವೆಗಳಲ್ಲಿ ವಾಹನ ಸಂಚಾರವನ್ನು ಡಿ.31ರ ರಾತ್ರಿ ಸಂಪೂರ್ಣ ಬಂದ್ ಮಾಡಲಾಗುವುದು, ಮುಖ್ಯವಾಗಿ ಬೆಂಗಳೂರು ಕೇಂದ್ರ ವಿಭಾಗದ ಎಂ ಜಿ ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ರಸ್ತೆ, ಕಮರ್ಷಿಯಲ್ ರಸ್ತೆಗಳಲ್ಲಿ ಮಹಿಳೆಯರಿಗೆ ಮತ್ತು ಮಕ್ಕಳಿಗೆ ವಿಶೇಷ ಜಾಗವನ್ನು ನಿಗಧಿಪಡಿಸಲಾಗುವುದು ಎಂದು ಹೇಳಿದರು.

ಹೊಯ್ಸಳ, ಚೀತಾ ಮತ್ತು ಕೋಬ್ರಾ ವಾಹನಗಳನ್ನು ಹೆಚ್ಚಿನ ಗಸ್ತು ತಿರುಗಲಿದ್ದು,ಯಾವುದೇ ಸಣ್ಣಪುಟ್ಟ ಘಟನೆ ನಡೆದರೂ ಕೆಲವೇ ನಿಮಿಷದಲ್ಲಿ ಪೊಲೀಸರು ಧಾವಿಸುವಂತೆ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ನಗರದ ಎಲ್ಲಾ ಪೊಲೀಸ್ ಪೇದೆಯಿಂದ ಹಿಡಿದು ಹಿರಿಯ ಅಧಿಕಾರಿಗಳವರೆಗೆ ಎಲ್ಲರೂ ಕರ್ತವ್ಯದಲ್ಲಿರಲು ಸೂಚನೆ ನೀಡಲಾಗಿದೆ ಹಿರಿಯ ಅಧಿಕಾರಿಗಳು ನಗರದ ಎಲ್ಲೆಡೆ ಸಂಚರಿಸಿ ಪರಿಸ್ಥಿತಿಯ ಮೇಲೆ ನಿಗಾ ವಹಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದರು.ನಗರದ್ಯಾಂತ 1,500 ಚೆಕ್ ಪೋಸ್ಟ್ ಗಳನ್ನು ನಿರ್ಮಿಸಲಾಗಿದ್ದು ಗಡಿಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ಯಾವುದೇ ಘಟನೆ ಸಂಭವಿಸಿದರೆ ತಕ್ಷಣ ಕಂಟ್ರೋಲ್ ರೂಮ್ 112ಕ್ಕೆ ತಿಳಿಸಬೇಕೆಂದು ಸಾರ್ವಜನಿಕರಿಗೆ ನಗರ ಪೊಲೀಸ್ ಆಯುಕ್ತರು ಮನವಿಮಾಡಿದ್ದಾರೆ ಎಂದು ತಿಳಿಸಿದರು.

ಈಗಾಗಲೇ ಬಾರ್ ರೆಸ್ಟೋರೆಂಟ್‌ಗಳ ಮಾಲೀಕರ ಸಭೆ ನಡೆಸಿ ಅಹಿತಕರ ಘಟನೆ ನಡೆಯ ಅವಕಾಶ ನೀಡದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ಹೇಳಿದರು.

ವಿಶೇಷ ಪರಿಶೀಲನೆ:ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಪಬ್‌ಗಳು ಮತ್ತು ಪಾರ್ಟಿ ಸ್ಥಳಗಳಲ್ಲಿ ಭದ್ರತೆಗಾಗಿ ಪರಿಶೀಲನೆ ಮಾಡಲು ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಅವಘಡಗಳನ್ನು ತಡೆಯಲು ಕಳೆದ ವರ್ಷದಂತೆ ಈ ವರ್ಷವೂ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗುತ್ತದೆ ಎಲ್ಲಾ ಪ್ರದೇಶಗಳಲ್ಲಿ ಪೊಲೀಸರು ಪರಿಶೀಲನೆ ನಡೆಸುತ್ತಿದ್ದು, ಸಿದ್ಧತೆಗಳ ಕುರಿತು ಮಾಹಿತಿ ನೀಡಲಿದ್ದಾರೆ ಎಂದರು.ಹೊಸ ವರ್ಷದ ಸಂಭ್ರಮದಲ್ಲಿ ಜನರು ದೊಡ್ಡ ಸಂಖ್ಯೆಯಲ್ಲಿ ಸೇರುವುದರಿಂದ ಸುರಕ್ಷತೆ ಮುಖ್ಯ.ಅಹಿತಕರ ಘಟನೆಗಳು ಮತ್ತು ಗೊಂದಲಗಳನ್ನು ತಡೆಯಲು. ಸಾರ್ವಜನಿಕರ ಸುರಕ್ಷತೆ ಮತ್ತು ಶಾಂತಿ ಕಾಪಾಡಲು ಪೊಲೀಸರು ಹೊಸ ವರ್ಷದ ಸಂಭ್ರಮ ಶಾಂತಿಯುತವಾಗಿ ನಡೆಯಲು ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದರು.

## ಬಸವ ಗೀತೆ ಸತ್ಯ ಸಂವಾದ ಗ್ರಂಥಗಳ ಲೋಕಾರ್ಪಣೆ



ಧೈರ್ಯದ ದಾರಿ

**ಮಾನ್ವಿ,ಡಿ.28–** ಪಟ್ಟಣದ ಬಿ.ವಿ.ಆರ್ ಇ-ಟೆಕ್ನೋ ಸ್ಕೂಲ್ ಆವರಣದಲ್ಲಿ ಶ್ರೀ ಬಸವ ಸೇವಾ ಪ್ರತಿಷ್ಠಾನ ಹಾಗೂ ಬಸವ ಕೇಂದ್ರ ಮಾನ್ವಿ, ಶರಣ ಸಾಹಿತ್ಯ ಪರಿಷತ್ತು ಮಾನ್ವಿ, ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ, ಸುದ್ದಿಮೂಲ ದಿನಪತ್ರಿಕೆ ರಾಯಚೂರು ಸಂಯುಕ್ತಾಶ್ರಯದಲ್ಲಿ ನಡೆದ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಶ್ರೀ ಬಸವರಾಜಸ್ವಾಮಿ ರವರು ರಚಿಸಿದ ಬಸವ ಗೀತೆ ಸತ್ಯ ಸಂವಾದ 9 ಸಂಪುಟಗಳ ಗುಚ್ಚ ಗ್ರಂಥಗಳ ಲೋಕಾರ್ಪಣೆಗೊಳಿಸಿ ನಿವೃತ್ತ ಉಪನ್ಯಾಸಕರಾದ ಬಿ.ಜಿ.ಹುಲಿ ಮಾತನಾಡಿ ಸಾಮಾನ್ಯ ಜನರು ಕೂಡ 12 ನೇ ಶತಮಾನದಲ್ಲಿ ಸಮ ಸಮಾಜ ಕಟ್ಟುವ ಮೂಲಕ ಮಹಾಕ್ರಾಂತಿಯನ್ನೆ ಮಾಡಿದ ಹಾಗೂ ಇಷ್ಟಲಿಂಗವನ್ನು ನೀಡುವ ಮೂಲಕ ಅಂಗ ಲಿಂಗ ಸಮಾರಸ್ಯದ ಅರಿವನ್ನು ನೀಡಿದ ಬಸವಣ್ಣನವರನ್ನು ಅದ್ಯತ್ಮಕ ನೆಲೆ ಗಟ್ಟಿನಲ್ಲಿ ನಮಗೆ ದರ್ಶನವನ್ನು ಮಾಡಿಸುವ ಉದ್ದೇಶದಿಂದ ಶ್ರೀ ಬಸವರಾಜಸ್ವಾಮಿಯವರು ತಮ್ಮ ಜೀವನದ ಅನುಭವಗಳನ್ನು ಬಸವ ಗೀತೆ ಸತ್ಯ ಸಂವಾದ ಕೃತಿಯ ಮೂಲಕ ತಿಳಿಸಿಕೊಟ್ಟಿದ್ದಾರೆ ಎಂದು ತಿಳಿಸಿದರು.

ಬಸವ ಗೀತೆ ಸತ್ಯ ಸಂವಾದ ಕೃತಿಯ ಲೇಖಕರಾದ ಸುದ್ದಿಮೂಲ ಪತ್ರಿಕೆಯ ಸಂಪಾದಕರಾದ ಬಸವರಾಜಸ್ವಾಮಿ ಕೃತಿಯ ಬಗ್ಗೆ ಮಾತನಾಡಿ ಬಸವಣ್ಣನವರನ್ನು ಸಾಹಿತಿಗಳು, ದರ್ಶನಿಕರು,ಚಿಂತಕರು,ಪ್ರಗತಿಪರರು ಒಂದೊಂದಾಗಿ ಅರ್ಥೈಸಿಕೊಂಡಿದ್ದಾರೆ ವ್ಯಾಕ್ಯನಿಸುತ್ತಾರೆ ಅದರೆ ಬಸವಣ್ಣವನರು ತಮ್ಮ ಅರಿವನ್ನು ಲಿಂಗಯ್ಯನೆಂದು,ಸಂಗಯ್ಯನೆಂದು ಅಂತರಂಗದ ಮೂಲಕ ಭಾವಿಸಿ ಅರಿವನ್ನು 2ನೇಪುಟಕ್ಕೆ►

## ವಂದೇ ಮಾತರಂ ರಾಷ್ಟ್ರಗೀತೆಯ 150 ನೇ ವರ್ಷಚಾರಣೆ ಅಂಗವಾಗಿ ಬೃಹತ್ ಜಾಥ




ಧೈರ್ಯದ ದಾರಿ

**ಮಾನ್ವಿ,ಡಿ.28–** ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಓಂ.ಮಂಡಳಿ ಶಿವಶಕ್ತಿ ಅವತಾರ್ ಸೇವ ಸಂಸ್ಥಾನ್ ವತಿಯಿಂದ ವಂದೇ ಮಾತರಂ ರಾಷ್ಟ್ರಗೀತೆಯ 150 ನೇ ವರ್ಷಚಾರಣೆ ಅಂಗವಾಗಿ ನಡೆದ ಬೃಹತ್ ಜಾಥಕ್ಕೆ ಓಂ.ಮಂಡಳಿ ಶಿವಶಕ್ತಿ ಅವತಾರ್ ಸೇವ ಸಂಸ್ಥಾನ್ ತಾಲೂಕು ಸಮಿತಿಯ ಬಿ.ಕೆ. ಅಕ್ಕಮ್ಮ ಚಾಲನೆ ನೀಡಿ ಮಾತನಾಡಿ ನಮ್ಮ ದೇಶಕ್ಕೆ ಸ್ವತಂತ್ರ್ಯಾ ಪೂರ್ವದಲ್ಲಿ ಸ್ವತಂತ್ರ್ಯಾ ಹೋರಾಟಗಾರರಿಗೆ ದೇಶಭಕ್ತಿರಿಗೆ ಸ್ಪೂರ್ತಿಯಾಗಿದ್ದ ವಂದೇ ಮಾತರಂ ರಾಷ್ಟ್ರಗೀತೆಯನ್ನು ರಚಿಸಿ 150 ವರ್ಷ ಆದ ಸಂದರ್ಭದಲ್ಲಿ ತಾಲೂಕಿನ ದೇಶಭಕ್ತರನ್ನು ಒಳಗೊಂಡು ಜಾಗೃತಿ ಜಾಥವನ್ನು ಅಯೋಜಿಸಲಾಗುತ್ತಿದೆ ಎಂದು ತಿಳಿಸಿದರು.ಪಟ್ಟಣದ ಡಾ.ಬಿ. ಆರ್.ಅಂಬೇಡ್ಕರ್ ವೃತ್ತದಿಂದ ಬಸವ ವೃತ್ತದ ಮೂಲಕ ತಹಸೀಲ್ದಾರ್ ಕಚೇರಿಯ ವರೆಗೆ ನೂರಾರು ಜನರು ಭಾರತ ಮಾತೆಯ ಭಾವಚಿತ್ರದ ಮೆರವಣಿಗೆಯೊಂದಿಗೆ ಜಾಥ ನಡೆಸಿದರು.ಓಂ.ಮಂಡಳಿ ಶಿವಶಕ್ತಿ ಅವತಾರ್ ಸೇವ ಸಂಸ್ಥಾನ್ ತಾಲೂಕು ಸಮಿತಿಯ ನೂರಾರು ಸದಸ್ಯರು,ಸಾರ್ವಜನಿಕರು ಭಾಗವಹಿಸಿದರು

# ಕೋರ್ಟ್ ಆದೇಶದ ಭೂ ಬೆಲೆ ನಿಗಧಿಗೆ ಆಗ್ರಹಿಸಿ ಜ.12 ಕುಡುತಿನಿಯಿಂದ ಭೂ ಸಂತ್ರಸ್ತರ ಪಾದಯಾತ್ರೆ



**ಬಳ್ಳಾರಿ, ಡಿ.28:** ತಾಲೂಕಿನ ಕುಡುತಿನಿ ಸುತ್ತಮುತ್ತಲ ಗ್ರಾಮಗಳ ಭೂ ಸಂತ್ರಸ್ತರ ಹೋರಾಟ ಸಮಿತಿ. ಹಾಗೂ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಲಕ್ಷ್ಮಿ ಮಿತ್ತಲ್ ಉದ್ದೇಶಿತ ಕೈಗಾರಿಕಾ ಪ್ರದೇಶದಲ್ಲಿ ನಿನ್ನೆ ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಅಧ್ಯಕ್ಷ, ಭೂ ಸಂತ್ರಸ್ತರ ಹೋರಾಟ ಸಮಿತಿ ಗೌರವಾಧ್ಯಕ್ಷ ಯು.ಬಸವರಾಜ್ ಸಂತ್ರಸ್ತರ ಸಭೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು ಕೆ.ಐ.ಡಿ.ಬಿ. ಅಭಿವೃದ್ಧಿ ಪ್ರದೇಶದಲ್ಲಿ, ಜಿಂದಾಲ್ ನ ಜೆ. ಎಫ್. ಇ. ಸ್ಟೀಲ್ ಎಲೆಕ್ಟ್ರಿಕಲ್ ಕೈಗಾರಿಕೆಗೆ ಸ್ಥಾಪನೆಗೆ ಸರ್ಕಾರ ಅವಕಾಶ ನೀಡಬಾರದು. ಮಿತ್ತಲ್ ಕೈಗಾರಿಕೆ. ಬ್ರಾಹ್ಮಿಣಿ ಕೈಗಾರಿಕೆ. ಹಾಗೂ ಎನ್ ಎಂ ಡಿ ಸಿ ಬೃಹತ್ ಕೈಗಾರಿಕಗಳು ಹೈಕೋರ್ಟ್ ನ ತೀರ್ಪಿನಂತೆ ವಂಚಕ ಭೂಬೆಲೆ ಸರಿಪಡಿಸಬೇಕು. ಹಾಗೂ ಮೂಲ ಉದ್ದೇಶಗಳಿಗೆ ಮಾತ್ರ ಭೂ ಬಳಕೆ ಆಗಬೇಕು. ಕೆಐಎಡಿಬಿ ಕಾನೂನುಗಳನ್ನು ಉಲ್ಲಂಘನೆ ಮಾಡಿ. ಮಿತ್ತಲ್ ಕೈಗಾರಿಕೆಯ ಪ್ರದೇಶವನ್ನು ತುಂಡು ತುಂಡಾಗಿ ಸಣ್ಣ ಕೈಗಾರಿಕೆಗಳಿಗೆ ಮಾರುವ ರಿಯಲ್ ಎಸ್ಟೇಟ್ ದಂಧೆಯನ್ನು ನಿಲ್ಲಿಸಲು ಒತ್ತಾಯಿಸಿದರು.

ಕೆ .ಐ. ಎ. ಡಿ .ಬಿ. ಸೆಕ್ಷನ್ 28(ಎ)ಪ್ರಕಾರ ಕೋರ್ಟ್ ಆದೇಶದಂತೆ ಭೂ ಬೆಲೆ ನಿಗದಿಗೆ ಒತ್ತಾಯಿಸಿ ಕುಡತನಿಯಿಂದ ಜಿಲ್ಲಾಧಿಕಾರಿ ಕಚೇರಿಗೆ ಜ12 ರಂದು ಬೃಹತ್ ಪಾದಯಾತ್ರೆಯನ್ನು ನಡೆಸಿ ಸಿಎಂಗೆ ಮನವಿ ಸಲ್ಲಿಸಲಿದೆಂದು ಹೇಳಿದರು.

ಸಭೆಯಲ್ಲಿ ಸಿಐಟಿಯು ರಾಜ್ಯ ಉಪಾಧ್ಯಕ್ಷ ಜೆ ಸತ್ಯ ಬಾಬು. ಜಿಲ್ಲಾ ಸಮಿತಿ ಜಂಟಿ ಕಾರ್ಯದರ್ಶಿ. ಎಂ ತಿಪ್ಪೇಸ್ವಾಮಿ. ರೈತ ಮುಖಂಡರಾಗಿರುವ ಹೋಳಿಗೆ ಸಿದ್ದಪ್ಪ. ಗೌನೂರ್ ಅಂಜಿನಪ್ಪ. ಕೃಷ್ಣಪ್ಪ ಹಟ್ಟಿ ಪಂಪಾಪತಿ . ಸೆಕ್ಷಾವಲಿ. ಶ್ರೀಧರ . ಕೊಳಗಲ್ ಮಲ್ಲಿಕಾರ್ಜುನ. ಹುಚ್ಚಪ್ಪ. ತೆಗೆ ಸ್ವಾಮಿ. ರಮೇಶ. ಕನ್ನಿಕೇರಿ ಭೀಮಣ್ಣ. ಧರ್ಮಣ್ಣ. ಜಂಬಣ್ಣ ಶಿವರಾಮ ರೆಡ್ಡಿ. ಬಿಳಿ ಬಾಯಪ್ಪ . ವಾಲ್ಮೀಕಿ ಶೇಖರ್. ಗೋವರ್ಧನ ರೆಡ್ಡಿ. ತಿಮ್ಮಾರೆಡ್ಡಿ. ಜಾನೆ ಕುಂಟೆ ಶೇಖರ್. ದೊಡ್ಡಬಸಪ್ಪ. ಲಕ್ಷ್ಮಣ. ಮಹಿಳಾ ಮುಖಂಡರು. ಹಂಪಮ್ಮ. ನಾಯಕರ ಮಲ್ಲಮ್ಮ. ಉಪ್ಪಾರ ದ್ಯಾವಮ್ಮ. ಹನುಮಕ್ಕ. ನೀಲಮ್ಮ ಮೊದಲಾದವರು ಇದ್ದರು.

# ಎಂಎನ್. ದೇಸಾಯಿ ಕಾಲೇಜಿನಲ್ಲಿ ಹೊಸ ಕ್ಯಾಲೆಂಡರ್ ಬಿಡುಗಡೆ



**ಕಲಬುರ್ಗಿ, ಡಿ.28–** ವಿದ್ಯಾರ್ಥಿಗಳು ಕೇವಲ ಪಠ್ಯವಲ್ಲದೇ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಗುಲಬರ್ಗಾ ವಿದ್ಯುತ್ ಪ್ರಸರಣಾ ನಿಗಮದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರಾದ ವಿಜಯಲಕ್ಷ್ಮೀ ಸಂದೀಪ್ ದೇಸಾಯಿ ಅವರು ಹೇಳಿದರು.

ನಗರದ ಹೊಸ ಜೇವರ್ಗಿ ರಸ್ತೆಯಲ್ಲಿರುವ ಪ್ರತಿಷ್ಠಿತ ಎಂ.ಎನ್. ದೇಸಾಯಿ ಪದವಿ ಮಹಾವಿದ್ಯಾಲಯದಲ್ಲಿ 2026ರ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನೀವು ಹೊಸ ವರ್ಷದಲ್ಲಿ ಏನು ಸಾಧನೆ ಮಾಡಬೇಕು ಎಂದು ಮಾಡಿಕೊಂಡಿದ್ದೀರಿ ಎಂಬುದನ್ನು ದೃಢಪಡಿಸಿಕೊಳ್ಳಬೇಕು ಎಂದರು.

ಹಿರಿಯ ಪತ್ರಕರ್ತ ಬಸವರಾಜ್ ಚಿನಿವಾರ್ ಅವರು ಮಾತನಾಡಿ, ಪದವಿ ವಿದ್ಯಾರ್ಥಿಗಳ ಅತ್ಯಂತ ನಿರ್ಣಾಯಕ ಘಟ್ಟವಾಗಿದೆ. ನಿಮ್ಮ ಭವಿಷ್ಯದ ಮಹತ್ವದ ಘಟ್ಟವಾಗಿದ್ದರಿಂದ ನೀವು ಜೀವನದಲ್ಲಿ ಏನು ಆಗಬೇಕು ಎಂದುಕೊಂಡಿರುವಿರೋ ಅದನ್ನು ಸಾಧಿಸಲು ನೀವು ಕಾರ್ಯಪ್ರವೃತ್ತರಾಗಿ. ನಿಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ನಿಮಗೆ ಆಸಕ್ತಿದಾಯಕ ಕ್ಷೇತ್ರವನ್ನು ಆಯ್ದುಕೊಳ್ಳಿ ಎಂದರು.

ಮುಖ್ಯ ಅತಿಥಿಗಳಾದ ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ರಾಘವೇಂದ್ರ ಎಂ.ಅವರು ಮಾತನಾಡಿದರು. ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಸಂದೀಪ್ ದೇಸಾಯಿ ಅವರು ವಹಿಸಿದ್ದರು. ವೇದಿಕೆಯ ಮೇಲೆ ಸಂಸ್ಥೆಯ ಕಾರ್ಯದರ್ಶಿ ಜಗನ್ನಾಥ್ ಪೂಜಾರಿ ನಾಗೂರ್ ಮತ್ತು ಇಕಬಾಲ್ ಹುಸೇನ್ ಅವರು ಉಪಸ್ಥಿತರಿದ್ದರು.

ಬಸವಕಲ್ಯಾಣದ ದೈಹಿಕ ಶಿಕ್ಷಣ ಶಿಕ್ಷಕ ಶಿವಶರಣಪ್ಪ ದೇಸಾಯಿ ಅವರು ಹಾಸ್ಯ ಹಾಗೂ ವಿಡಂಬನೆಯೊಂದಿಗೆ ವಿದ್ಯಾರ್ಥಿಗಳಿಗೆ ಅನೇಕ ಮೌಲಿಕ ವಿಚಾರಗಳನ್ನು ಮನಮುಟ್ಟುವಂತೆ ಹೇಳಿದರು. ಆರಂಭದಲ್ಲಿ ವಿದ್ಯಾರ್ಥಿನಿಯರು ಕಾವೇರಿ ಮತ್ತು ಪವಿತ್ರ ಅವರು ಪ್ರಾರ್ಥನಾಗೀತೆ ಹಾಡಿದರು. ನಾಗರಾಜ್ ಪಟ್ಟಣಕರ್ ಅವರು ಸ್ವಾಗತಿಸಿದರು. ಉಪನ್ಯಾಸಕಿಜ್ಯೋತಿ ಕೂಡ್ಲರ್ ಅವರು ವಂದಿಸಿದರು. ಉಪನ್ಯಾಸಕ ಡಿ.ಪಿ. ಸಜ್ಜನ್ ಅವರು ಕಾರ್ಯಕ್ರಮ ನಿರೂಪಿಸಿದರು.

# ಭದ್ರೇಶ್ವರ ಸುಕ್ಷೇತ್ರದಲ್ಲಿ ಯಕ್ಷ ದೀಪಾರತಿ ಕಾರ್ಯಕ್ರಮ



**ಬೀದರ್:ಡಿ.28:** ತಾಲ್ಲೂಕಿನ ಬಾವಗಿ ಗ್ರಾಮದ ಭದ್ರೇಶ್ವರ ಸುಕ್ಷೇತ್ರದಲ್ಲಿ ಧನುರ್ಮಾಸದ ಪ್ರಯುಕ್ತ ಲೋಕಕಲ್ಯಾಣಕ್ಕಾಗಿ ರವಿವಾರ ಭಕ್ತರಿಂದ ಯಕ್ಷ ದೀಪಾರತಿ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಈ ಸಂದರ್ಭದಲ್ಲಿ ಭದ್ರೇಶ್ವರನಿಗೆ ಸಂಕಲ್ಪ ಮಾಡಿಸಿ, ಗದ್ದುಗೆ ರುದ್ರಾಭಿಷೇಕ, ಅಲಂಕಾರ ಪೂಜೆ ಸೇರಿದಂತೆ ವಿಶೇಷ ಪೂಜಾ ವಿಧಿಗಳು ಜರುಗಿದವು. ಭದ್ರೇಶ್ವರ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ಮಂತ್ರಘೋಷಗಳೊಂದಿಗೆ ಪೂಜಾ ಕಾರ್ಯವನ್ನು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗುಂಡಯ್ಯ ಸ್ವಾಮೀಜಿ ಅವರು, "ಬಾವಗಿ ಭದ್ರೇಶ್ವರನು ಸಮಸ್ತ ನಾಡಿನ ಜನರಿಗೆ ಆರೋಗ್ಯ, ಆಯುಷ್ಯ ಮತ್ತು ಸಮೃದ್ಧಿಯನ್ನು ಕರುಣಿಸಲಿ" ಎಂದು ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಭದ್ರೇಶ್ವರ ಮಠದ ಶ್ರೀ ಶಿವಕುಮಾರ ಸ್ವಾಮೀಜಿ, ಗುಂಡಯ್ಯ ಸ್ವಾಮೀಜಿ, ಪ್ರಭುಕಾರಕನಳ್ಳಿ, ಬಾಬು ಕಾಕನಹಳ್ಳಿ, ಸಂತೋಷಿ ಮಕ್ಕಳಾದ ವಾತ್ಸಲ್ಯಾ, ಸಂಧ್ಯಾ, ವಿಜಿಯಮ್ಮ, ಸೌಮ್ಯ, ಅನಿತಾ, ದೀಪಾ, ನವ್ಯ, ಗಾಯತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# ಸಮಾಜ ಒಡೆಯುವುದೇ ಬಿಜೆಪಿ ಸಾಧನೆ

ಮೇಲೆ ನಿಂತಿದೆ ಎಂದು ಹೇಳಿದವರು ಅಂಬೇಡ್ಕರ್ ಎಂದರು.ಪಂಚಾಯ್ತಿಗಳಲ್ಲಿ ಗ್ಯಾರಂಟಿ ಸಮಾವೇಶ

ರಾಜ್ಯದ ಕಾಂಗ್ರೆಸ್ ಸರ್ಕಾರ ಜಾರಿ ಮಾಡಿರುವ ಪಂಚ ಗ್ಯಾರಂಟಿಗಳನ್ನು ಯಾವ ಸರ್ಕಾರದಿಂದಲೂ ನಿಲ್ಲಿಸಲು ಸಾಧ್ಯವಿಲ್ಲ. ರಾಜ್ಯದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿ. ಇದನ್ನೇ ಬಿಜೆಪಿ ದೇಶದ ಹಲವು ರಾಜ್ಯಗಳಲ್ಲಿ ಜಾರಿ ಮಾಡಿದೆ ಎಂದು ಈ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಗ್ಯಾರಂಟಿ ಯೋಜನೆಯ ಯಶಸ್ಸನ್ನು ಆಧಾರವಾಗಿಟ್ಟುಕೊಂಡು ಪ್ರತಿ ಪಂಚಾಯ್ತಿಗಳಲ್ಲಿ ಗ್ಯಾರಂಟಿ ಸಂಭ್ರಮ, ಸಮಾವೇಶಗಳನ್ನು ಆಚರಿಸುವಂತೆ ಅವರು ಕಾರ್ಯಕರ್ತರಿಗೆ ಕರೆ ನೀಡಿದರು.

ಕೆಲಸ ಮಾಡುವರಿಗೆ ಟಿಕೆಟ್

ಮುಂದೆ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯ್ತಿ ಚುನಾವಣೆಗಳು ಬರುತ್ತಿವೆ. ಈ ಚುನಾವಣೆಯಲ್ಲಿ ಬೂತ್ ಮಟ್ಟದಲ್ಲಿ ಕೆಲಸ ಮಾಡುವವರಿಗೆ ಟಿಕೆಟ್ ನೀಡಲಾಗುವುದು. ನಾಯಕರ ಹಿಂದೆ-ಮುಂದೆ ಓಡಾಡುವವರಿಗೆ ಟಿಕೆಟ್ ಇಲ್ಲ ಎಂದು ಅವರು ಹೇಳಿದರು.ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯ್ತಿ ಚುನಾವಣೆಗಳಿಗೆ ಟಿಕೆಟ್‌ಗಾಗಿ ಅರ್ಜಿ ಸಲ್ಲಿಕೆ ಇಂದಿನಿಂದಲೇ ಆರಂಭವಾಗಿದೆ. ಸಾಮಾನ್ಯ ವರ್ಗದವರು ಅರ್ಜಿ ಜತೆ 50 ಸಾವಿರ ರೂಪಾಯಿ, ಪರಿಶಿಷ್ಟ ಪಂಗಡದವರು ಅರ್ಜಿ ಜತೆ 25 ಸಾವಿರ ರೂ.ಗಳನ್ನು ಡಿಡಿ ರೂಪದಲ್ಲಿ ಸಲ್ಲಿಸಬೇಕು. ಇದು ಕಾಂಗ್ರೆಸ್ ಪಕ್ಷದ ಕಟ್ಟಡದ ನಿಧಿಗಾಗಿ ನಾವು ಟಿಕೆಟ್ ಆಕಾಂಕ್ಷಿಗಳಿಂದ ಪಡೆಯುತ್ತಿರುವ ಹಣ ಎಂದರು.

ಈ ಸಂದರ್ಭದಲ್ಲಿ ಕೆಲ ಮಹಿಳಾ ಕಾರ್ಯಕರ್ತರು ಮಹಿಳೆಯರು ಟಿಕೆಟ್‌ಗೆ ಅರ್ಜಿ ಸಲ್ಲಿಸುವ ಹಣವನ್ನು ಕಡಿಮೆ ಮಾಡಿ ಎಂದಾಗ, ಹಣ ಕಡಿಮೆ ಮಾಡಲಾಗುವುದಿಲ್ಲ. ನನ್ನ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ. ಚುನಾವಣೆಗೆ ಎಷ್ಟು ಹಣ ಖರ್ಚಾಗುತ್ತದೆ ಎಂಬುದು ನನಗೆ ಗೊತ್ತಿದೆ. ಶೇ. 50 ರಷ್ಟು ಮಹಿಳಾ ಮೀಸಲಾತಿ ಇದೆ. ಮಹಿಳೆಯರೇ ಆಗಲೀ, ಯಾರೇ ಆಗಲೀ 50 ಸಾವಿರ ಎಂದಾಗ, ವೇದಿಕೆಯಲ್ಲಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಹಿಳೆಯರಿಗೆ 25 ಸಾವಿರ ರೂ. ನಿಗದಿ ಮಾಡುವಂತೆ ಸೂಚಿಸಿದಾಗ ಅದಕ್ಕೆ ಒಪ್ಪಿಗೆ ನೀಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿಗಳ ಸೂಚನೆಯಂತೆ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯ್ತಿ ಚುನಾವಣೆಗೆ ಟಿಕೆಟ್‌ಗೆ ಅರ್ಜಿ ಸಲ್ಲಿಸುವ ಮಹಿಳೆಯರಿಗೆ 25 ಸಾವಿರ ರೂ. ನಿಗದಿ ಮಾಡಿರುವುದಾಗಿ ಹೇಳಿದರು.

ನರೇಗಾ ಯೋಜನೆಯಿಂದ ಮಹಾತ್ಮಗಾಂಧಿ ಹೆಸರನ್ನು ಕೈ ಬಿಟ್ಟಿರುವುದರ ವಿರುದ್ಧ ಜನವರಿ 5 ರಿಂದ ಪ್ರತಿ ಗ್ರಾಮ ಪಂಚಾಯ್ತಿ ಮಟ್ಟದಲ್ಲೂ ಹೋರಾಟವನ್ನು ರೂಪಿಸಲಾಗುವುದು. ಕಾರ್ಯಕರ್ತರು ಈ ಹೋರಾಟದಲ್ಲಿ ಭಾಗವಹಿಸುವಂತೆ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಸಚಿವರಾದ ಕೆ.ಜೆ. ಜಾರ್ಜ್, ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ, ಕೆಪಿಸಿಸಿ ಕಾರ್ಯಾಧ್ಯಕ್ಷ, ಸಂಸದ ಡಾ. ಜಿ.ಸಿ. ಚಂದ್ರಶೇಖರ್, ಎಐಸಿಸಿ ಜಂಟಿ ಕಾರ್ಯದರ್ಶಿ ಡಾ. ಪಾಲಕ್ ವರ್ಮ, ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ನಜೀರ್ ಅಹಮದ್, ರಾಜ್ಯಸಭೆ ಮಾಜಿ ಸದಸ್ಯ ರಾಜೀವ್‌ಗೌಡ, ಎಐಸಿಸಿ ಕಾರ್ಯದರ್ಶಿ ಸೂರಜ್ ಹೆಗಡೆ ಸೇರಿದಂತೆ ಹಲವು ನಾಯಕರು ಉಪಸ್ಥಿತರಿದ್ದರು.

# ಬಸವ ಗೀತೆ ಸತ್ಯ ಸಂವಾದ ಗ್ರಂಥಗಳ ಲೋಕಾರ್ಪಣೆ

ಗುರುವಾಗಿಸಿಕೊಂಡವರು ಬಸವಣ್ಣನವರು, ಬಸವಣ್ಣವನರ ಮೂಲಕ ಪಡೆದ ಅರಿವಿಗೆ ಶರಣದವರು ಶರಣರೆನಿಸಿಕೊಂಡರು , ಈಡಿ ಜಗತ್ತಿನಲ್ಲಿ 7 ಲಕ್ಷ ಜನರು ಒಂದೇಬಾರಿಗೆ ಬಸವಣ್ಣ ನವರ ಪ್ರಭಾವಕ್ಕೆ ಒಳಗಾಗಿ ಅರಿವಿಗೆ ಶರಣಾಗಿರುವುದು ದಾಖಲೆಯಾಗಿದೆ . ನಮ್ಮ ಬದುಕಿಗೆ ಬಸವಾದಿ ಶರಣರು ತಮ್ಮ ವಚನಗಳ ಮೂಲಕ 22 ಸಾವಿರ ಸೂತ್ರಗಳನ್ನು ನೀಡಿದ್ದಾರೆ. ಅರಿವಿಗೆ ಹೋಗಿ ಅಜ್ಞಾನದ ಮರೆವನ್ನು ತೆಗೆದು ಹಾಕಿದವರು ಶರಣರು ಎನ್ನಿಸಿಕೊಳ್ಳುತ್ತಾರೆ ಶರಣರು ತಿಳಿಸಿದಂತೆ ಅರಿವು ಎಲ್ಲರಲ್ಲಿಯೂ ಇರುತ್ತದೆ ಅದರೆ ಅರಿವೆ ಗುರು ಎಂದು ಮನಸ್ಸು ಅರವಿಗೆ ಶಿಷ್ಯನಾಗಿ ಶರಣರ ಸೂತ್ರಗಳನ್ನು ನಾವು ಬದುಕಿನಲ್ಲಿ ಅಳವಡಿಸಿಕೊಂಡಲ್ಲಿ ಈ ಸೂತ್ರಗಳು ನಮ್ಮನು ಅಂತರಂಗದ ಕಡೆ ಕರೆದುಕೊಂಡು ಹೋಗುತ್ತವೆ. ಶರಣರು ತಿಳಿಸಿದಂತೆ ನಾವು ನಿತ್ಯ ನಮ್ಮ ಉಪಜೀವನಕ್ಕಾಗಿ ಮಾಡುವ ಕಾಯಕವು ಕಾಯಕವಲ್ಲ , ಕಾಯ ಕಾಯದೊಳೊಂದಾಗುವುದು ಕಾರ್ಯಕವಾಗಿದೆ ,ಸೂಕ್ಷ್ಮ ಕಾಯ ಕಾರಣ ಕಾಯದೊಂದಿಗೆ ಒಂದಾಗುವುದು ಪರಕಾಯವಾಗಿದೆ ನಮ್ಮಲಿರುವ ಅರಿವನ್ನು ಬಳಸಿಕೊಳ್ಳುವುದಕ್ಕೆ ಬಸವಾದಿ ಶರಣರ ವಚನಗಳು, ಸತ್ಸಾಂಗ,ಉಪನ್ಯಾಸ,ಭೋದನೆಗಳು ನೆರವಾಗುತ್ತವೆ ಎಂದು ತಿಳಿಸಿದರು.

ಬಸವ ಗೀತೆ ಸತ್ಯ ಸಂವಾದ ಕೃತಿಯ ಲೇಖಕರಾದ ಸುದ್ದಿಮೂಲ ಪತ್ರಿಕೆಯ ಸಂಪಾದಕರಾದ ಬಸವರಾಜಸ್ವಾಮಿಯವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಣಾಧಿಕಾರಿ ಡಿ.ಜಿ.ಕರ್ಕಿಹಳ್ಳಿ, ಬಸವ ಕೇಂದ್ರದ ಗೌರವಾಧ್ಯಕ್ಷರಾದ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು, ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಈ.ನರಸಿಂಹ, ಕಸಾಪ ತಾ. ಅಧ್ಯಕ್ಷ ಶರಣಬಸವ ನೀರಮಾನ್ವಿ ಮಾತನಾಡಿದರು.

ಕಾರ್ಯಕ್ರಮದಲ್ಲಿ, ಬಿ.ವಿ.ಆರ್. ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ವಿ.ರೆಡ್ಡಿ , ಬಸವ ಕೇಂದ್ರದ ತಾ. ಅಧ್ಯಕ್ಷ ಜಿ.ಎಂ.ರಂಗಪ್ಪ ಮೇದಾ, ಮಹಿಳಾ ಘಟಕದ ಅಧ್ಯಕ್ಷೆ ಜಯಲಕ್ಷ್ಮೀ ಪಾಟೀಲ್, ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ರಾಜಾ ಸುಭಾಶ್ಚಂದ್ರ ನಾಯಕ, ಹೆಚ್.ಶರ್ಫುದ್ದೀನ್ ಪೋತ್ನಾಳ್, ಮೂಕಪ್ಪ ಕಟ್ಟಿಮನಿ,ಹಿರಿಯ ಸುದ್ದಿಮೂಲ ಪತ್ರಿಕೆಯ ವರದಿಗಾರ ಪಿ.ಪರಮೇಶ.ಸೇರಿದಂತೆ ಇನ್ನಿತರರು ಭಾಗವಹಿಸಿದರು.

ಸೇರಿದಂತೆ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ತಾ. ಸುದ್ದಿಮೂಲ ವರದಿಗಾರರಾದ ಪಿ.ಪರಮೇಶ ಪ್ರಕಟಣೆಯಲ್ಲಿ ಕೋರಿದ್ದಾರೆ .

# ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ಪತ್ರಕರ್ತರಿಗೆ ಪ್ರಶಸ್ತಿ ಪ್ರದಾನ

# ಪತ್ರಕರ್ತರು ಸಮಾಜಮುಖಿಯಾಗಿ ಯೋಚಿಸಲಿ: ಎನ್.ಎಸ್.ಬೋಸರಾಜು ಸಲಹೆ

ಪತ್ರಿಕಾರಂಗವನ್ನು ಪ್ರವೇಶಿಸುವ ಪ್ರತಿಯೊಬ್ಬರಿಗೂ ತರಬೇತಿಯ ಅವಶ್ಯಕತೆ ಇರುತ್ತದೆ. ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನರು ಪತ್ರಿಕಾ ಕ್ಷೇತ್ರಕ್ಕೆ ಬರುತ್ತಿದ್ದು, ಅವರಿಗೆ ಕಾರ್ಯಾಗಾರ ಏರ್ಪಡಿಸಬೇಕು. ಯಾವುದೇ ವಿಷಯವನ್ನು ಬರೆಯುವಾಗ, ತೋರಿಸುವಾಗ ಅದರಲ್ಲಿ ಸತ್ಯವನ್ನು ಹುಡುಕಬೇಕು. ಅರೆಬರೆ ಮಾಹಿತಿ, ಮೂಲದೊಂದಿಗೆ ನಿರ್ಧಾರಕ್ಕೆ ಬರಬಾರದು. ಪತ್ರಕರ್ತರು ಅಧ್ಯಯನ ಮಾಡಬೇಕು. ಪತ್ರಕರ್ತರು ತಮ್ಮ ಜವಾಬ್ದಾರಿ ಅರಿತು ಆತ್ಮಸಾಕ್ಷಿಯಿಂದ ಕೆಲಸ ಮಾಡಿದಾಗ, ಪತ್ರಿಕಾ ವೃತ್ತಿಯ ಘನತೆ ಹೆಚ್ಚಲಿದೆ ಎಂದು ತಿಳಿಸಿದರು.

ಈ ವೇಳೆ ಕಲಬುರಗಿ ಪೀಠದ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಬಿ.ವೆಂಕಟಸಿಂಗ್ ಅವರು ಮಾತನಾಡಿ, ಕೆಲವು ದಶಕಗಳ ಹಿಂದೆ, ರಾಜ್ಯದಲ್ಲಿ ಮೈಸೂರು ಬಿಟ್ಟರೆ ಸ್ವತಂತ್ರವಾಗಿ ಪತ್ರಿಕಾ ಭವನವು ರಾಯಚೂರು ಜಿಲ್ಲೆಯಲ್ಲಿ ಮಾತ್ರ ಇತ್ತು. ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಸಂಸ್ಥೆಯು ಅನೇಕ ದಶಕಗಳಿಂದ ನಿರಂತರ ಸೇವೆ ಮಾಡುತ್ತಿದೆ. ಈ ಮೂಲಕ ಪತ್ರಕರ್ತರಿಗೆ ಆರ್ಥಿಕ ಸಹಾಯ ಮಾಡುತ್ತಿದೆ. ರಾಯಚೂರಿನ ಪತ್ರಕರ್ತರಿಗೆ ಬೇಕಾಗುವ ವಿವಿಧ ಸೌಲಭ್ಯ, ವಿವಿಧ ದತ್ತಿ ಪ್ರಶಸ್ತಿಗಳನ್ನು ನೀಡುತ್ತ ಪತ್ರಕರ್ತರನ್ನು ಪ್ರೋತ್ಸಾಹಿಸುತ್ತಿದೆ ಎಂದರು. ಕಲ್ಯಾಣ ಕರ್ನಾಟಕ ಭಾಗದಿಂದ ಮೊಟ್ಟಮೊದಲ ಬಾರಿಗೆ ಮಾಹಿತಿ ಆಯುಕ್ತರನ್ನಾಗಿ ತಮ್ಮನ್ನು ನೇಮಕ ಮಾಡಲಾಗಿದ್ದು, ತಮ್ಮ ಆಡಳಿತಾವಧಿಯಲ್ಲಿ ಗುರುತರ ಕಾರ್ಯ ಮಾಡುವುದಾಗಿ ಬಿ.ವೆಂಕಟಸಿಂಗ್ ಹೇಳಿದರು.

ರಿಪೋರ್ಟರ್ಸ್ ಗಿಲ್ಡ್ ವೆಬ್‌ಸೈಟ್ ಲೋಕಾರ್ಪಣೆ: ಕಾರ್ಯಕ್ರಮದಲ್ಲಿ ಶಾಸಕರಾದ ಬಸನಗೌಡ ದದ್ದಲ್ ಅವರು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವೆಬ್‌ಸೈಟ್ ಲೋಕಾರ್ಪಣೆ ಮಾಡಿದರು. ಇದೆ ವೇಳೆ, ಬಿ.ವೆಂಕಟಸಿಂಗ್ ಅವರಿಗೆ ವಿಶೇಷ ಸನ್ಮಾನ ಮಾಡಲಾಯಿತು.

ವಿವಿಧ ಪತ್ರಕರ್ತರಿಗೆ ಸನ್ಮಾನ: ಕಾರ್ಯಕ್ರಮದಲ್ಲಿ ಪ್ರಜಾಪ್ರಸಿದ್ಧ ದಿನಪತ್ರಿಕೆಯ ಹಿರಿಯ ಉಪ ಸಂಪಾದಕರಾದ ರಘುನಾಥರೆಡ್ಡಿ ಮನ್ಸಲಾಪೂರು, ಪ್ರಜಾವಾಣಿ ದಿನಪತ್ರಿಕೆಯ ರಾಯಚೂರು ಜಿಲ್ಲಾ ವರದಿಗಾರರಾದ ಚಂದ್ರಕಾಂತ್ ಮಸಾನಿ, ಪವರ್ ಟಿವಿ ಛಾಯಾಗ್ರಾಹಕರರಾದ ಅಬ್ದುಲ್ ಖಾದರ್, ಅಮೋಘ ಕೇಬಲ್ ವರದಿಗಾರರಾದ ಶ್ರೀನಿವಾಸ ಕೆ., ಪ್ರಜಾಪ್ರಸಿದ್ಧ ದಿನಪತ್ರಿಕೆಯ ವರದಿಗಾರರಾದ ಬಿ. ರಾಜು ಅವರಿಗೆ ವಿವಿಧ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷರಾದ ವಿಜಯ್ ಜಾಗಟಗಲ್, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ., ವಿಜಯವಾಣಿ ಪತ್ರಿಕೆಯ ಗಂಗಾವತಿ ಸ್ಥಾನಿಕ ಸಂಪಾದಕರಾದ ಜಗನ್ನಾಥ ಆರ್.ದೇಸಾಯಿ, ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷರಾದ ಪಿ.ಚನ್ನಬಸವ ಬಾಗಲವಾಡ, ರಾಯಚೂರು ರಿಪೋರ್ಟರ್ಸ್ ಗಿಲ್ಡ್ನ ಪ್ರಧಾನ ಕಾರ್ಯದರ್ಶಿಗಳಾದ ವೆಂಕಟೇಶ ಹೂಗಾರ ಹಾಗೂ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಪ್ರಧಾನ ಕಾರ್ಯದರ್ಶಿ ಖಾನ್‌ಸಾಬ್ ಮೋಮಿನ್, ಡಿ.ಕೆ.ಕಿಸಾನ್ ಸೇರಿದಂತೆ ವಿವಿಧ ಗಣ್ಯರು ಇದ್ದರು.

ಸಣ್ಣ ವಿರೇಶ್ ನಿರೂಪಿಸಿದರು. ಸತ್ಯವಂತಿ ದೇಶಪಾಂಡೆ ಪ್ರಾರ್ಥಿಸಿದರು.

# ವಿದ್ಯಾರ್ಥಿ ಸಂಘಗಳ ಚುನಾವಣೆ:ಕೆಪಿಸಿಸಿಯಿಂದ ಸಮಿತಿ ರಚನೆ



**ಬೆಂಗಳೂರು, ಡಿ. 28:** ರಾಜ್ಯದಲ್ಲಿ ಮತ್ತೆ ವಿದ್ಯಾರ್ಥಿ ಸಂಘಗಳ ಚುನಾವಣೆ ನಡೆಸಲು, ವಿದ್ಯಾರ್ಥಿ ದಿಸೆಯಿಂದಲೇ ನಾಯಕತ್ವ ಗುಣಗಳನ್ನು ಬೆಳೆಸುವ ದೃಷ್ಟಿಯಿಂದ ಚುನಾವಣೆ ಪ್ರಕ್ರಿಯೆ, ರೂಪು–ರೇಷೆ ಕುರಿತು ಅಧ್ಯಯನ ಮಾಡಲು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯು ಉನ್ನತ ಮಟ್ಟದ ಸಮಿತಿ ರಚಿಸಿದೆ.

ಈ ಬಗ್ಗೆ ಕುರಿತು ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಸಮಿತಿ ಸಂಚಾಲಕರು, ಸದಸ್ಯರನ್ನು ನೇಮಿಸಿ ಆದೇಶ ಹೊರಡಿಸಿದ್ದಾರೆ.ವಿದ್ಯಾರ್ಥಿ ಸಂಘದ ಚುನಾವಣೆಗಳನ್ನು ನಡೆಸಬೇಕು ಎಂಬ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರ ಅಭಿಪ್ರಾಯಗಳ ಆಧಾರದ ಮೇಲೆ ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಈ ಸಮಿತಿ ರಚನೆ ಮಾಡಿದ್ದಾರೆ.

ಈ ಸಮಿತಿಗೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಸಂಚಾಲಕರಾಗಿ ನೇಮಕಗೊಂಡಿದ್ದಾರೆ.

ಉಳಿದಂತೆ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಮುಖ್ಯ ಸಚೇತಕ ಸಲೀಂ ಅಹಮದ್, ಶಾಸಕರಾದ ರಿಜ್ವಾನ್ ಅರ್ಷದ್, ಬಿ. ಶಿವಣ್ಣ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ಬಸವನಗೌಡ ಬಾದರ್ಲಿ ಹಾಗೂ ಎಚ್.ಎಸ್. ಮಂಜುನಾಥ್, ಕೀರ್ತಿ ಗಣೇಶ್ ಈ ಸಮಿತಿಯಲ್ಲಿ ಇದ್ದಾರೆ.

ವಿದ್ಯಾರ್ಥಿ ಚುನಾವಣೆಯನ್ನು ಯಾವ ಹಂತದಲ್ಲಿ ನಡೆಸಬಹುದು, ಸಾಧಕ–ಬಾಧಕ, ಚುನಾವಣೆ ಪ್ರಕ್ರಿಯೆ, ವ್ಯವಸ್ಥೆ, ಪಾರದರ್ಶಕತೆ, ರಾಜಕೀಯೇತರ ರೀತಿಯಲ್ಲಿ ಚುನಾವಣೆ ನಡೆಸಬೇಕೇ ಎಂಬುದು ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಬಗ್ಗೆ ಅಧ್ಯಯನ ನಡೆಸಲು ಸಮಿತಿಗೆ ತಿಳಿಸಲಾಗಿದೆ.

ಸಮಿತಿ ರಚನೆಯಾದ ಹದಿನೈದು ದಿನಗಳ ಒಳಗಾಗಿ ಸಮಿತಿ ಅಧ್ಯಯನ ನಡೆಸಿ ವರದಿ ಸಲ್ಲಿಸಬೇಕು ಎಂದು ಕೆ.ಪಿ.ಸಿ.ಸಿ ಅಧ್ಯಕ್ಷರು ಸೂಚಿಸಿದ್ದಾರೆ..

# ಗ್ರಾಮಗಳ ಅಭಿವೃದ್ಧಿಯಲ್ಲಿ ಕಂಪ್ಯೂಟರ್ ಆಪರೇಟರ್‌ಗಳ ಪಾತ್ರ ಮಹತ್ವದ್ದು: ಇಓ ಮಾಣಿಕರಾವ್ ಪಾಟೀಲ್



**ಬೀದರ್ :ಡಿ.28:** ಗ್ರಾಮಗಳ ಅಭಿವೃದ್ಧಿಯಲ್ಲಿ ಗ್ರಾಮ ಪಂಚಾಯತ್ ಕಂಪ್ಯೂಟರ್ ಆಪರೇಟರ್ ಗಳ ಪಾತ್ರ ಮಹತ್ವದಾದದ್ದು ಎಂದು ಬೀದರ ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಹೇಳಿದರು.

ಅವರು ಶುಕ್ರವಾರ ಬೀದರ ತಾಲ್ಲೂಕ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ಸ್ ನೌಕರರ ಕ್ಷೇಮಾಭಿವೃದ್ಧಿ ಸಂಘ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕ ಪಂಚಾಯತ್ ಬೀದರ್ ಇವರ ಸಹಯೋಗದಲ್ಲಿ ಆಯೋಜಿಸಿದ ಉತ್ತಮ ಆಡಳಿತ ದಿನ ಹಾಗೂ ಕಂಪ್ಯೂಟರ್ ಪಿತಾಮಹ ಚಾರ್ಲ್ ಬ್ಯಾಬೇಜ್ ರವರ ಜನ್ಮದಿನದ ಪ್ರಯುಕ್ತ ಕಂಪ್ಯೂಟರ್ ಆಪರೇಟರ್ ಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಯೋಜನೆಗಳ ಪ್ರತಿ ಹಂತದ ಮಾಹಿತಿ ಸಂಗ್ರಹಣೆ ಮಾಡುವಲ್ಲಿ ಕಂಪ್ಯೂಟರ್ ಆಪರೇಟರ್ ಗಳು ಕೆಲಸ ನಿರ್ವಹಿಸುತ್ತಿರುತ್ತಾರೆ ಅವರ ಸೇವೆ ಶ್ಲಾಘನಿಯವಾದದ್ದು ಎಂದರು.

ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಸಂಜುಕುಮಾರ್ ಮಾತನಾಡಿ, ಕಂಪ್ಯೂಟರ್ ಆಪರೇಟರ್ ಗಳು ಒತ್ತಡದ ಮಧ್ಯೆಯು ಉತ್ತಮ ಕೆಲಸ ನಿರ್ವಹಿಸುತ್ತಿದ್ದಾರೆ. ಗ್ರಾಮ ಪಂಚಾಯತ್ ಗೆ ಸೇವೆ ಅನನ್ಯವಾದದ್ದು ಎಂದು ಹೇಳಿದರು.

ಪಿಡಿಓ ಶರತ್ ಅಭಿಮಾನ್ ಮಾತನಾಡಿ, ಕಂಪ್ಯೂಟರ್ ಆಪರೇಟರ್ ಗಳು ಸರಿಯಾದ ರೀತಿಯಲ್ಲಿ ಕೆಲಸ ನಿರ್ವಹಿಸಿದರು ಅವರಿಗೆ ಸರಿಯಾದ ಸಮಯಕ್ಕೆ ವೇತನವಾಗುತ್ತಿಲ್ಲ ಇದರತ್ತ ಸರ್ಕಾರ ಗಮನಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ಸ್ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವೀರೇಂದ್ರ ಸಜ್ಜನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ತಕ್ಷಣ ಅಂತ್ಯಗೊಳಿಸುವಂತೆ ಮನವಿ

**ಯಾದಗಿರಿ:ಡಿ.28:**ಜಿಲ್ಲೆಯ ಪಾನ್ ಶಾಪ್‌ಗಳು, ಜನರಲ್ ಸ್ಟೋರ್‌ಗಳು, ರೆಸ್ಟೋರೆಂಟ್‌ಗಳು, ಲಾಡ್ಜ್‌ಗಳು ಹಾಗೂ ಬೀದಿಬದಿ ವ್ಯಾಪಾರಿಗಳಲ್ಲಿ ಬಾಲ ಕಾರ್ಮಿಕರು ಮಾತ್ರವಲ್ಲದೆ 14 ರಿಂದ 18 ವರ್ಷದೊಳಗಿನ ಕಿಶೋರ ಕಾರ್ಮಿಕರು ಸಹ ವ್ಯಾಪಕವಾಗಿ ದುಡಿಮೆಗೆ ಒಳಪಡುತ್ತಿರುವುದು ಅತ್ಯಂತ ಆತಂಕಕಾರಿ ಮತ್ತು ಗಂಭೀರ ಬೆಳವಣಿಗೆಯಾಗಿದೆ. ಈ ಸ್ಥಿತಿ ಕೇವಲ ಸಾಮಾಜಿಕ ವೈಫಲ್ಯವಲ್ಲ; ಭಾರತದ ಸಂವಿಧಾನ ಮತ್ತು ಜಾರಿಯಲ್ಲಿರುವ ಕಾರ್ಮಿಕ ಹಾಗೂ ಮಕ್ಕಳ ರಕ್ಷಣಾ ಕಾನೂನುಗಳ ಸ್ಪಷ್ಟ ಉಲ್ಲಂಘನೆ ಆಗಿದೆ.

ಭಾರತ ಸಂವಿಧಾನದ ವಿಧಿ 21 ಪ್ರಕಾರ ಪ್ರತಿಯೊಬ್ಬ ನಾಗರಿಕನಿಗೆ ಗೌರವಯುತ ಜೀವನದ ಹಕ್ಕು ಇದೆ. ಕಿಶೋರರು ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯ ಹಂತದಲ್ಲಿರುವುದರಿಂದ, ಅವರನ್ನು ದೀರ್ಘ ಸಮಯ ದುಡಿಮೆಗೆ ಬಳಸುವುದು ಅವರ ಜೀವ ಮತ್ತು ಗೌರವಕ್ಕೆ ಧಕ್ಕೆ ತರುವ ಕ್ರಿಯೆಯಾಗುತ್ತದೆ. ಜೊತೆಗೆ ವಿಧಿ 21ಎ ಅನ್ವಯ 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕು ಇದ್ದು, ಬಾಲ ಕಾರ್ಮಿಕ ಪದ್ಧತಿ ಈ ಹಕ್ಕನ್ನು ನೇರವಾಗಿ ಕಸಿದುಕೊಳ್ಳುತ್ತಿದೆ.

ವಿಧಿ 24 ಪ್ರಕಾರ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಅಪಾಯಕಾರಿ ಉದ್ಯೋಗಗಳಲ್ಲಿ ಬಳಸುವುದು ಸಂಪೂರ್ಣ ನಿಷೇಧವಾಗಿದೆ. ಆದರೆ ವಾಸ್ತವದಲ್ಲಿ ಪಾನ್ ಶಾಪ್, ಹೋಟೆಲ್, ಲಾಡ್ಜ್ ಹಾಗೂ ಬೀದಿಬದಿ ವ್ಯಾಪಾರಗಳಲ್ಲಿ ಮಕ್ಕಳನ್ನು ದುಡಿಮೆಗೆ ಬಳಸಲಾಗುತ್ತಿದೆ. ಇದಲ್ಲದೆ ಕಿಶೋರ ಕಾರ್ಮಿಕರನ್ನು (14–18 ವರ್ಷ) ಅಪಾಯಕಾರಿ ಮತ್ತು ಆರೋಗ್ಯಕ್ಕೆ ಹಾನಿಕಾರಕ ಕೆಲಸಗಳಲ್ಲಿ ಬಳಸುವುದೂ ಕಾನೂನುಬಾಹಿರವಾಗಿದೆ.

ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 (2016ರ ತಿದ್ದುಪಡಿ) ಪ್ರಕಾರ,

14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಯಾವುದೇ ಉದ್ಯೋಗ ಸಂಪೂರ್ಣ ನಿಷೇಧ,14 ರಿಂದ 18 ವರ್ಷದ ಕಿಶೋರರನ್ನು ಅಪಾಯಕಾರಿ ಉದ್ಯೋಗಗಳು ಮತ್ತು ಪ್ರಕ್ರಿಯೆಗಳಲ್ಲಿ ಬಳಸುವುದು ಕಟ್ಟುನಿಟ್ಟಾಗಿ ನಿಷೇಧವಾಗಿದೆ.

ಪಾನ್ ಶಾಪ್, ತಂಬಾಕು ಮಾರಾಟ, ಹೋಟೆಲ್ ಅಡುಗೆಮನೆ, ಲಾಡ್ಜ್‌ಗಳ ಸೇವೆ, ರಾತ್ರಿ ಸಮಯದ ದುಡಿಮೆ, ಬೀದಿಬದಿ ವ್ಯಾಪಾರ ಇತ್ಯಾದಿ ಕ್ಷೇತ್ರಗಳಲ್ಲಿ ಕಿಶೋರರನ್ನು ಬಳಸುವುದು ಈ ಕಾಯ್ದೆಯ ಉಲ್ಲಂಘನೆಯಾಗಿದೆ.

ಇದಲ್ಲದೆ ಜುವೆನೈಲ್ ಜಸ್ಟಿಸ್ (ಮಕ್ಕಳ ಆರೈಕೆ ಮತ್ತು ಸಂರಕ್ಷಣೆ) ಕಾಯ್ದೆ  2015 ಪ್ರಕಾರ, ಮಕ್ಕಳ ಅಥವಾ ಕಿಶೋರರ ದುರ್ಬಳಕೆ, ದುಡಿಮೆ ಹಾಗೂ ಶೋಷಣೆ ಗಂಭೀರ ಅಪರಾಧವಾಗಿದ್ದು, ಇದಕ್ಕೆ ಕಠಿಣ ಶಿಕ್ಷೆಯ ಪ್ರಾವಧಾನವಿದೆ. ಹಾಗೆಯೇ ಶಿಕ್ಷಣ ಹಕ್ಕು ಕಾಯ್ದೆ 2009 ಮಕ್ಕಳ ಶಿಕ್ಷಣಕ್ಕೆ ಅಡ್ಡಿಯಾಗುವ ಯಾವುದೇ ಕ್ರಿಯೆಯನ್ನು ಅಪರಾಧವಾಗಿ ಪರಿಗಣಿಸುತ್ತದೆ.

ಸಂವಿಧಾನದ ವಿಧಿ 39(ಇ) ಮತ್ತು 39(ಎಫ್) ಗಳಲ್ಲಿ ಮಕ್ಕಳ ಹಾಗೂ ಕಿಶೋರರ ಆರೋಗ್ಯ, ಶಕ್ತಿ ಮತ್ತು ಗೌರವವನ್ನು ರಕ್ಷಿಸುವುದು ರಾಜ್ಯದ ಮೂಲ ಕರ್ತವ್ಯವೆಂದು ಹೇಳಲಾಗಿದೆ. ಆದರೆ ಜಿಲ್ಲೆಯಲ್ಲಿ ನಡೆಯುತ್ತಿರುವ ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಈ ಸಂವಿಧಾನಿಕ ಕರ್ತವ್ಯಗಳ ಮೇಲಿನ ನಿರ್ಲಕ್ಷ್ಯವನ್ನು ತೋರಿಸುತ್ತದೆ.

ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಮಕ್ಕಳ ಶಿಕ್ಷಣವನ್ನು ಕಸಿದುಕೊಳ್ಳುತ್ತದೆ, ಕಿಶೋರರ ಭವಿಷ್ಯವನ್ನು ಅಂಧಕಾರದತ್ತ ತಳ್ಳುತ್ತದೆ ಮತ್ತು ಸಮಾಜದಲ್ಲಿ ಶಾಶ್ವತ ಅಸಮಾನತೆ ಹಾಗೂ ಅಪರಾಧ ಪ್ರವೃತ್ತಿಗೆ ದಾರಿ ಮಾಡಿಕೊಡುತ್ತದೆ. ಇದು ಮುಂದಿನ ತಲೆಮಾರಿನ ಮೇಲೆ ನಡೆಯುತ್ತಿರುವ ಅನ್ಯಾಯವಾಗಿದೆ.

ಈ ಹಿನ್ನೆಲೆಯಲ್ಲಿ ಕನ್ನಡ ರಕ್ಷಣಾ ವೇದಿಕೆ ಜಿಲ್ಲಾಡಳಿತ, ಕಾರ್ಮಿಕ ಇಲಾಖೆ, ಹಾಗೂ ಮಕ್ಕಳ ಕಲ್ಯಾಣ ಸಮಿತಿಗಳಿಗೆ ಪತ್ರಿಕಾ ಮಾಧ್ಯಮದ ಮುಖಾಂತರ ಅತ್ಯಂತ ಗಂಭೀರವಾಗಿ ಮನವಿ ಮಾಡುತ್ತದೆ.

1.ಜಿಲ್ಲೆಯಾದ್ಯಂತ ತಕ್ಷಣ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಬೇಕು.

2.ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ಬಳಸುತ್ತಿರುವ ಪಾನ್ ಶಾಪ್, ಹೋಟೆಲ್, ಲಾಡ್ಜ್ ಹಾಗೂ ಬೀದಿಬದಿ ವ್ಯಾಪಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

3. ಕಾನೂನು ಉಲ್ಲಂಘಿಸಿದ ಸಂಸ್ಥೆಗಳ ಪರವಾನಗಿ ರದ್ದುಪಡಿಸಬೇಕು.

4.ರಕ್ಷಿಸಲಾದ ಮಕ್ಕಳ ಮತ್ತು ಕಿಶೋರರಿಗೆ ಶಿಕ್ಷಣ, ಕೌಶಲ್ಯ ತರಬೇತಿ ಹಾಗೂ ಪುನರ್ವಸತಿ ವ್ಯವಸ್ಥೆ ಒದಗಿಸಬೇಕು. ಜೊತೆಗೆ ನಿರ್ಲಕ್ಷ್ಯ ತೋರಿರುವ ಅಧಿಕಾರಿಗಳ ಮೇಲೂ ಜವಾಬ್ದಾರಿ ನಿಗದಿಪಡಿಸಿ ಕ್ರಮ ಕೈಗೊಳ್ಳಬೇಕು.

ಮಕ್ಕಳ ಮತ್ತು ಕಿಶೋರರ ರಕ್ಷಣೆ ಸರ್ಕಾರದ ದಯೆಯಲ್ಲ; ಅದು ಸಂವಿಧಾನ ನೀಡಿರುವ ಕಡ್ಡಾಯ ಆದೇಶ. ಈ ವಿಷಯದಲ್ಲಿ ಇನ್ನೂ ವಿಳಂಬವಾದರೆ, ಅದು ಸಂವಿಧಾನ ವಿರೋಧಿ ನಿರ್ಲಕ್ಷ್ಯವೆಂದು ಪರಿಗಣಿಸಲಾಗುತ್ತದೆ ಎಂಬುದನ್ನು ಜಿಲ್ಲಾಡಳಿತ ಅರಿಯಬೇಕು.ಕನ್ನಡ ರಕ್ಷಣಾ ವೇದಿಕೆ

ನಾಗಪ್ಪ. ಬಿ. ಹೊನಗೇರಾ

ಜಿಲ್ಲಾಧ್ಯಕ್ಷರು ಯಾದಗಿರಿ

# ಬೆಂಗಳೂರಲ್ಲಿ ಡ್ರಗ್ಸ್ ಫ್ಯಾಕ್ಟರಿ ಪತ್ತೆ : ರಾಜ್ಯ ಪೊಲೀಸರಿಗೆ ಗೃಹ ಸಚಿವ ಪರಮೇಶ್ವರ್ ತರಾಟೆ



**ಬೆಂಗಳೂರು,ಡಿ.28–** ಬೆಂಗಳೂರಿನಲ್ಲಿ ಮಾದಕ ವಸ್ತುಗಳ ತಯಾರಿಕಾ ಘಟಕಗಳು ಪತ್ತೆಯಾಗಿರುವುದಕ್ಕೆ ಗೃಹಸಚಿವ ಡಾ.ಜಿ.ಪರಮೇಶ್ವರ್ ಸಿಡಿಮಿಡಿಯಾಗಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ.ಇಂದು ಬೆಂಗಳೂರಿನ ಪೊಲೀಸ್ ಆಯುಕ್ತರ ಕಚೇರಿಗೆ ಆಗಮಿಸಿದ ಗೃಹಸಚಿವರು, ನಗರ ಪೊಲೀಸ್ ಆಯುಕ್ತರು, ಜಂಟಿ ಆಯುಕ್ತರು, ಉಪಆಯುಕ್ತರು ಮತ್ತು ಸಹಾಯಕ ಆಯುಕ್ತರ ಜೊತೆ ಹೊಸ ವರ್ಷಾಚರಣೆಗೆ ಪೂರ್ವಭಾವಿ ಭದ್ರತೆ ಕುರಿತು ಚರ್ಚೆ ನಡೆಸಿದರು.

ಈ ವೇಳೆ ಮಾದಕ ವಸ್ತುಗಳ ವಿಚಾರವಾಗಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಈ ಹಿಂದೆ ಮೈಸೂರಿನಲ್ಲಿ ಇದೇ ರೀತಿಯ ಸಿಂಥೆಟಿಕ್ ಡ್ರಗ್ಸ್ ಉತ್ಪಾದನೆಯ ಕಾರ್ಖಾನೆ ಪತ್ತೆಯಾಗಿತ್ತು. ಮುಂದೆ ಇಂತಹ ಘಟನೆಗಳು ಮರಕಳಿಸಬಾರದೆಂದು ಕಟ್ಟಪ್ಪಣೆ ಮಾಡಲಾಗಿತ್ತು.ಹಾಗಿದ್ದರೂ ಮಾದಕ ವಸ್ತುಗಳ ತಯಾರಿಕಾ ಘಟಕಗಳು ಬೆಂಗಳೂರಿನಲ್ಲಿರುವು ದನ್ನು ಮಹಾರಾಷ್ಟ್ರದ ಪೊಲೀಸರ ಕಾರ್ಯಾಚರಣೆಯಿಂದ ಕಂಡುಬಂದಿರುವುದು ನಾಚಿಕೆಗೇಡು. ಇದರಿಂದ ರಾಜ್ಯ ಪೊಲೀಸರ ಕಾರ್ಯಕ್ಷಮತೆ ಪ್ರಶ್ನಾರ್ಹವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದ ಪೊಲೀಸರ ಬಳಿಯೂ ಗುಪ್ತದಳ ಇದೆ, ಮಾದಕ ದ್ರವ್ಯ ನಿಗ್ರಹ ಪಡೆ ಇದೆ. ಅದಕ್ಕಾಗಿ ಪ್ರತ್ಯೇಕ ಪಡೆಗಳೇ ಕೆಲಸ ಮಾಡುವಾಗ ಡ್ರಗ್ಸ್ ತಯಾರಿಕೆ ಜಾಲ ಪತ್ತೆಯಾಗದಿರುವುದು ಯಾವುದೇ ರೀತಿಯಲ್ಲೂ ಸಮರ್ಥನಿಯವಲ್ಲ ಎಂದಿದ್ದಾರೆ.

ಕರ್ನಾಟಕ ರಾಜ್ಯವನ್ನು ಮಾದಕ ವ್ಯಸನ ಮುಕ್ತವಾಗಿಸಬೇಕು ಎಂದು ನಮ್ಮ ಸರ್ಕಾರ ಪಣತೊಟ್ಟಿದೆ. ಮುಖ್ಯಮಂತ್ರಿಯಾದಿಯಾಗಿ ಎಲ್ಲರೂ ಬೆಂಬಲ ನೀಡುತ್ತಿದ್ದೇವೆ. ಯಾವುದೇ ಸಂದರ್ಭದಲ್ಲೂ ಪೊಲೀಸರಿಗೆ ಕೈಕಟ್ಟಿ ಹಾಕಿಲ್ಲ. ಹೀಗಿದ್ದರೂ ನೆರೆ ರಾಜ್ಯದ ಪೊಲೀಸರು ಇಲ್ಲಿಗೆ ಬಂದು ಕಾರ್ಯಾಚರಣೆ ನಡೆಸುವುದಾದರೆ ಮೊದಲೇ ಏಕೆ ಮುಂಜಾಗ್ರತೆ ವಹಿಸಲಿಲ್ಲ ಎಂದು ಕಿಡಿಕಾರಿದ್ದಾರೆ.

ಮಾದಕ ವಸ್ತುಗಳನ್ನು ಸಹಿಸಿಕೊಳ್ಳಬಾರದು ಎಂದು ಹಲವು ಬಾರಿ ತಾಕೀತು ಮಾಡಿದ್ದೇವೆ. ಇದರ ನಿಯಂತ್ರಣಕ್ಕೆ ಸರ್ಕಾರ ಎಲ್ಲ ರೀತಿಯ ನೆರವು ನೀಡುತ್ತಿದೆ. ಹಾಗಿದ್ದರೂ ಏಕೆ ಇಂತಹ ಕೃತ್ಯಗಳು ನಡೆಯುತ್ತಿದೆ ಎಂದು ಪ್ರಶ್ನಿಸಿದ್ದಾರೆ.

ಮಾದಕ ವಸ್ತುಗಳ, ಸರಬರಾಜು, ಮಾರಾಟ ಮತ್ತು ಬಳಕೆಯೇ ದೊಡ್ಡ ಸವಾಲಾಗಿತ್ತು. ಅಂಥದ್ದರಲ್ಲಿ ಮಾದಕವಸ್ತುಗಳೇ ಇಲ್ಲಿ ತಯಾರಾಗುತ್ತಿವೆ ಎಂದರೆ ನಾಚಿಕೆಗೇಡು. ಇದಕ್ಕೆ ಸಂಬಂಧಪಟ್ಟ ಹಿರಿಯ ಪೊಲೀಸ್ ಅಧಿಕಾರಿಗಳನ್ನೆ ಹೊಣೆ ಮಾಡುವುದಾಗಿ ಮೊದಲೇ ಎಚ್ಚರಿಕೆ ನೀಡಿದ್ದಾರೆ. ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವ ಬಗ್ಗೆಯೂ ಪರಿಶೀಲಿಸುವಂತೆ ಗೃಹ ಸಚಿವರು ಸೂಚಿಸಿದ್ದಾರೆ.

# ಜೀವಾ ಆಸ್ಪತ್ರೆಯಿಂದ ಅತ್ಯುತ್ತಮ ಸೇವೆ: ಮಾತೋಶ್ರೀ ದಾಕ್ಷಾಯಿಣಿ ಅಪ್ಪ



**ಕಲಬುರಗಿ,ಡಿ.28:** ಹೆಸರಿಗೆ ತಕ್ಕಂತೆ ಜನರಿಗೆ ಅತ್ಯಂತ ಉಪಯುಕ್ತವಾದ ಚಿಕಿತ್ಸೆ ನೀಡಿ ಜೀವ ಉಳಿಸುವ ಕೆಲಸ ನಗರದ ಜೀವಾ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಾಡುತ್ತಿದೆ ಎಂದು ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಮತ್ತು ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ದಾಕ್ಷಾಯಿಣಿ ಎಸ್.ಅಪ್ಪ ಅವರು ಹೇಳಿದರು.

ನಗರದ ಜೀವಾ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪ್ರಥಮ ವಾರ್ಷಿಕೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಜನರ ಜೀವ ಕಾಪಾಡುವುದು ಪುಣ್ಯದ ಕೆಲಸವಾಗಿದ್ದು, ಅದನ್ನು ಜೀವಾ ಆಸ್ಪತ್ರೆಯವರು ಶ್ರದ್ಧೆಯಿಂದ ಮಾಡುತ್ತಿದ್ದಾರೆ. ಕಲಬುರಗಿಯನ್ನು ಮೆಡಿಕಲ್ ಹಬ್ ಮಾಡುವಲ್ಲಿ ಎಲ್ಲ ವೈದ್ಯರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ,ನಗರ ಪೊಲೀಸ್ ಕಮಿಷನರ್ ಡಾ.ಶರಣಪ್ಪ ಎಸ್.ಡಿ ಅವರು ಮಾತನಾಡಿದರು.

ಬಡದಾಳದ ಚನ್ನಮಲ್ಲ ಶಿವಾಚಾರ್ಯರು, ಚಿನ್ಮಯಗಿರಿಯ ವೀರಮಹಾಂತ ಶಿವಾಚಾರ್ಯರು ಸಾನಿಧ್ಯವಹಿಸಿದ್ದರು. ಜಿಪಂ ಮಾಜಿ ಉಪಾಧ್ಯಕ್ಷ ಹರ್ಷಾನಂದ ಗುತ್ತೇದಾರ, ಬಾಲರಾಜ್ ಗುತ್ತೇದಾರ, ಡಾ.ಅಲ್ಲಮಪ್ರಭು ದೇಶಮುಖ,ಸತೀಶ ಗುತ್ತೇದಾರ,ಸಂತೋಷ ಗುತ್ತೇದಾರ,ಜಮುನಾ ಗುತ್ತೇದಾರ,ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ, ಗಿರಿಜಾಶಂಕರ ಶೆಟ್ಟಿ,ಆಸ್ಪತ್ರೆಯ ನಿರ್ದೇಶಕರಾದ ಡಾ.ಸುಶೀಲ ಗುತ್ತೇದಾರ, ಡಾ.ಅಜಯ್ ಗುತ್ತೇದಾರ, ಡಾ.ದಿವ್ಯಾ ಗುತ್ತೇದಾರ, ಡಾ.ಶಿಫಾಲಿ ಗುತ್ತೇದಾರ, ಸುಮಿತ್, ಆಡಳಿತಾಧಿಕಾರಿ ಡಾ.ಕೃಷ್ಣಾ ಕುಲಕರ್ಣಿ ಅವರು ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

# ತಾಂಡವ ಕಲಾನೃತ್ಯ ಸಂಸ್ಥೆಯಿಂದ ಶಾಸ್ತ್ರೀಯ, ಜಾನಪದ ನೃತ್ಯ ಪ್ರದರ್ಶನ

ಬಳ್ಳಾರಿ, ಡಿ.28: ತಾಂಡವ ಕಲಾ ನೃತ್ಯ ಸಂಸ್ಥೆ ತಾಂಡವ ನೃತ್ಯ ಕಲೋತ್ಸವ ಕಾರ್ಯಕ್ರಮದಲ್ಲಿ ಸಂಸ್ಥೆಯ ಕಲಿಕೆಯ ವಿದ್ಯಾರ್ಥಿಗಳಿಂದ ಶಾಸ್ತ್ರೀಯ ನೃತ್ಯ ಮತ್ತು ಜಾನಪದ ನೃತ್ಯಗಳನ್ನು ಪ್ರದರ್ಶನ ಮಾಡಲಾಯಿತು ಈ ಕಾರ್ಯಕ್ರಮದ ಉದ್ಘಾಟನೆ ಮಾಡಿದ ಯಲ್ಲನಗೌಡ ಶಂಕರ ಬಂಡಿ ಅಧ್ಯಕ್ಷರು ಜಿಲ್ಲಾ ಕಲಾವಿದ ಸಂಘ ಇವರು ಮಾತನಾಡುತ್ತಾ ಸಾಂಸ್ಕೃತಿಕ ಪರಂಪರೆಗೆ ಮಕ್ಕಳಿಗೆ ತರಬೇತಿ ನೀಡುವ ಮೂಲಕ ಮುಂದುವರಿಸುವ ಕಾರ್ಯಕ್ರಮವನ್ನು ಇಂತಹ ಸಂಘ–ಸಂಸ್ಥೆಗಳು ಹಲವಾರು ಮಾಡುತ್ತಾ ಬಂದಿದೆ ಅಂತಹ ಸಂಸ್ಥೆಗಳಿಗೆ ವೇದಿಕೆಯನ್ನು ಕಲ್ಪಿಸುವಲ್ಲಿ ನಮ್ಮ ಜಿಲ್ಲಾ ಕಲಾವಿದರ ಸಂಘವು ನಿರಂತರವಾಗಿ ಪ್ರಯತ್ನ ಪಡುತ್ತದೆ. ಮುಂದಿನ ದಿನಗಳಲ್ಲಿ ನಮ್ಮ ಸಂಘದಿಂದ ಇಂತಹ ಕಲಾ ಸಂಘಗಳಿಗೆ ವೇದಿಕೆಯನ್ನು ಕಲ್ಪಿಸಲಾಗುತ್ತದೆ ಎಂಬುದಾಗಿ ಉದ್ಘಾಟನದಲಿ ಮಾತನಾಡಿದರು

ಕಾರ್ಯಕ್ರಮದಲ್ಲಿ ಕೊಟ್ರೇಶ್ ಶಿಕ್ಷಕರು ಬಳ್ಳಾರಿ ಇವರ ಮಾತಾನಾಡುತ್ತಾ ಸಾಂಸ್ಕೃತಿಕ ಪರಂಪರೆಗಳನ್ನ ನೃತ್ಯ ಸಂಗೀತ ನಾಟಕಗಳ ಮೂಲಕ ಮಕ್ಕಳಿಗೆ ಈಗಿಂದಲೇ ತರಬೇತಿ ನೀಡಿದರೆ ಒಳ್ಳೆಯ ಸಂಸ್ಕಾರವಂತ ಮಕ್ಕಳಾಗಿ ನಾಡಿನ ಭವಿಷ್ಯವನ್ನು ರೂಪಿಸುವಲ್ಲಿ ಅವರ ಪಾತ್ರ ಮಹತ್ವದಾಗುತ್ತದೆ ಎಂಬುದಾಗಿ ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಅಣ್ಣಾಜಿ ಕೃಷ್ಣರೆಡ್ಡಿ ಉಪನ್ಯಾಸಕರು ಪ್ರದರ್ಶನ ಕಲೆ ನಾಟಕ ವಿಭಾಗ ಮಾತನಾಡುತ್ತಾ ಮಕ್ಕಳು ಮತ್ತು ಪೋಷಕರು ಇಬ್ಬರೂ ಕೂಡ ಸಾಂಸ್ಕೃತಿಕ ರಾಯಭಾರಿಗಳು ಮಕ್ಕಳು ನೃತ್ಯವನ್ನು ಮಾಡಿದರೆ ಪೋಷಕರು ನಾಟಕಗಳನ್ನು ಮಾಡಬೇಕು ಮತ್ತೆ ತರಬೇತಿಗಳನ್ನು ಪಡೆಯುವ ಮೂಲಕ ಅವರು ಕೂಡ ಸಾಂಸ್ಕೃತಿಕ ಪರಂಪರೆಗೆ ಕೈಜೋಡಿಸುವ ನಿಟ್ಟಿನಲ್ಲಿ ಸಹಕಾರ ನೀಡಿದರೆ ತರಬೇತಿ ಕಾರ್ಯಗಳನ್ನು ಮಾಡಲಾಗುತ್ತದೆ ಎಂಬುದಾಗಿ ನುಡಿದರು




ಕಾರ್ಯಕ್ರಮ ದಲ್ಲಿ ಸಂಸ್ಥೆಯ ಅಧ್ಯಕ್ಷರಾದ ವಿನೋದ್ ಮತ್ತು ವೈದ್ಯ. ಪ್ರಕಾಶ್ ಭಗವತಿ ಜಿಲ್ಲಾ ಆಸ್ಪತ್ರೆ ವೈದ್ಯರು ಭಾಗವಹಿಸಿದ್ದರು ಪ್ರಾರ್ಥನ ಗೀತೆಯನ್ನು ಕುಮಾರಿ ತನ್ಮಯಿ ನೆರವೇರಿಸಿದರು ಕಾರ್ಯಕ್ರಮದಲ್ಲಿ ಕುಮಾರಿ ಸಿಂಚನ ಅವರಿಂದ ಶಾಸ್ತ್ರೀಯ ನೃತ್ಯ ಕುಮಾರಿ ನೇತ್ರ ತಂಡದಿಂದ ಜನಪದ ನೃತ್ಯಗಳನ್ನು ಪ್ರದರ್ಶನ ಮಾಡಲಾಯಿತು . ದಿನಾಂಕ 27 12 2025 ರಂದು ಸಂಜೆ ಆರು ಮೂವತ್ತಕ್ಕೆ ಕೃಷ್ಣ ಪ್ಲಾಜಾದಲಿ ಸ್ಥಳದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಸಂಸ್ಥೆಯ ಅಧ್ಯಕ್ಷರಾದ ವಿನೋದ್ ಅವರು ಪತ್ರಿಕ ಪ್ರಕಟಣೆ ತಿಳಿಸಿದ್ದಾರೆ

# ಭದ್ರತೆ ವಿಷಯದಲ್ಲಿ ರಾಜಿ ಇಲ್ಲ:ಜಗತ್ತಿಗೆ ಸಂದೇಶ ರವಾನೆ



**ನವದೆಹಲಿ,ಡಿ.28–**ಆಪರೇಷನ್ ಸಿಂಧೂರ್ ದೇಶದ ಭದ್ರತೆಗೆ ಬದ್ಧತೆಯ ಪ್ರದರ್ಶ ನವಾಗಿತ್ತು. ಪಾಕಿಸ್ತಾನದ ದುಸ್ಸಾಹಸದ ವಿರುದ್ಧದ ಕಾರ್ಯಾಚರಣೆ ನಡೆಸುವ ಮೂಲಕ ಭಾರತ , ಭದ್ರತೆಯ ವಿಷಯದಲ್ಲಿ ರಾಜಿ ಮಾಡಿಕೊಳ್ಳುವುದಿಲ್ಲ ಎಂಬ ಸಂದೇಶವನ್ನು ಜಗತ್ತಿಗೆ ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆಇದರ ಜೊತೆಗೆ ವಿಜ್ಞಾನ ಮತ್ತು ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತದ ಸಾಧನೆಗಳನ್ನು ಮುಕ್ತಕಂಠದಿಂದ ಪ್ರಶಂಶಿಸಿದ್ದು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದ ಮೊದಲ ಭಾರತೀಯ ಶುಭಾಂಶು ಶುಕ್ಲಾ ಸಾಧನೆ ಕೊಂಡಾಡಿ ಶ್ಲಾಘಿಸಿದ್ದಾರೆ.2025ರ ವರ್ಷದ ಕೊನೆಯ ಮನದ ಮಾತಿನಲ್ಲಿ ಇಡೀ ವರ್ಷ ಆದ ಕೆಲವು ಪ್ರಮುಖ ಘಟನೆಗಳು ಸೇರಿದಂತೆ ಹೆಮ್ಮೆ ಪಡುವ ಹಲವು ಕ್ಷಣಗಳು ಘಟನೆಗಳನ್ನು ನೆನಪು ಮಾಡಿಕೊಂಡಿದ್ದಾರೆ

ಆಕಾಶವಾಣಿಯ ಮನದ ಮಾತಿನ 129 ನೇ ಸಂಚಿಕೆಯಲ್ಲಿ ದೇಶವಾಸಿಗಳನ್ನುದ್ದೇಶಿಸಿ ಮಾತನಾಡಿದ ಅವರು ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತ ಒಗ್ಗಟ್ಟು ಪ್ರದರ್ಶಿಸಿತ್ತು. ಭಯೋತ್ಪಾದಕರು ಭಾರತದ ತಂಟೆಗೆ ಬಂದರೆ ಹುಡುಕಿಕೊಂಡು ಹೋಗಿ ಸದೆಬಡಿಯುತ್ತೇವೆ ಎನ್ನುವುದನ್ನು ನಿರೂಪಿಸಿದ ಕ್ಷಣ ಎಂದಿದ್ದಾರೆ"ಈ ವರ್ಷ, 'ಆಪರೇಷನ್ ಸಿಂಧೂರ್' ಪ್ರತಿಯೊಬ್ಬ ಭಾರತೀಯನ ಹೆಮ್ಮೆಯ ಸಂಕೇತವಾಯಿತು. ಇಂದಿನ ಭಾರತ ತನ್ನ ಭದ್ರತೆಯ ವಿಷಯದಲ್ಲಿ ರಾಜಿ ಮಾಡಿಕೊಳ್ಳುವುದಿಲ್ಲ ಎಂಬುದನ್ನು ಜಗತ್ತು ಸ್ಪಷ್ಟವಾಗಿ ನೋಡಿದ ಆಪರೇಷನ್ ಸಿಂಧೂರ್' ಸಮಯದಲ್ಲಿ, ವಿಶ್ವದ ಮೂಲೆ ಮೂಲೆಗಳಿಂದ ಭಾರತ ಮಾತೆಯ ಮೇಲಿನ ಪ್ರೀತಿ ಮತ್ತು ಭಕ್ತಿಯ ಚಿತ್ರಗಳು ಹೊರಹೊಮ್ಮಿತ್ತು ಎಂದು ತಿಳಿಸಿದ್ದಾರೆವಂದೇ ಮಾತರಂ' 150 ವರ್ಷಗಳನ್ನು ಪೂರೈಸಿದಾಗಲೂ ಇದೇ ಮನೋಭಾವ ಕಂಡುಬಂದಿತು ಎಂದು ಅವರು ಹೇಳಿದ್ದಾರೆ

ಚಾಂಪಿಯನ್ಸ್ ಟ್ರೋಫಿ ಮತ್ತು ವಿಶ್ವಕಪ್‌ನಲ್ಲಿ ಜಯಗಳಿಸಿದ ಭಾರತದ ಪುರುಷ ಮತ್ತು ಮಹಿಳಾ ಕ್ರಿಕೆಟ್ ತಂಡಗಳನ್ನು ಪ್ರಧಾನಿ ಮೋದಿ ಶ್ಲಾಘಿಸಿದ್ದು ಈ ಸಾಧನೆಗಳನ್ನು 2025 ರ ಪ್ರಮುಖ ಸಾಧನೆಗಳು ಎಂದು ತಿಳಿಸಿದ್ದಾರೆ

"2025 ಕ್ರೀಡೆಗಳ ದೃಷ್ಟಿಯಿಂದಲೂ ಸ್ಮರಣೀಯ ವರ್ಷವಾಗಿತ್ತು. ಪುರುಷರ ಕ್ರಿಕೆಟ್ ತಂಡ ಐಸಿಸಿ ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದಿತು. ಮಹಿಳಾ ಕ್ರಿಕೆಟ್ ತಂಡ ಮೊದಲ ಬಾರಿಗೆ ವಿಶ್ವಕಪ್ ಗೆದ್ದಿತು. " "ಭಾರತದ ಹೆಣ್ಣುಮಕ್ಕಳು ಮಹಿಳಾ ಅಂಧರ ಟಿ20 ವಿಶ್ವಕಪ್ ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ ಎಂದು ಬಣ್ಣಿಸಿದರು.ವಿಶ್ವ ಚಾಂಪಿಯನ್‌ಶಿಪ್‌ಗಳಲ್ಲಿ ಹಲವಾರು ಪದಕಗಳನ್ನು ಗೆಲ್ಲುವ ಮೂಲಕ, ಪ್ಯಾರಾ-ಅಥ್ಲೀಟ್‌ಗಳು ಯಾವುದೇ ಅಡೆತಡೆಗಳು ದೃಢಸಂಕಲ್ಪವನ್ನು ತಡೆಯಲು ಸಾಧ್ಯವಿಲ್ಲ ಎಂದು ಸಾಬೀತುಪಡಿಸಿದರು ಎಂದು ನೆನಪಿಸಿಕೊಂಡಿದ್ದಾರೆ.ಭಾರತ ವಿಜ್ಞಾನ ಮತ್ತು ಬಾಹ್ಯಾಕಾಶ ಕ್ಷೇತ್ರದಲ್ಲೂ ದೈತ್ಯ ಹೆಜ್ಜೆಗಳನ್ನು ಇಟ್ಟಿದೆ. ಶುಭಾಂಶು ಶುಕ್ಲಾ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದ ಮೊದಲ ಭಾರತೀಯರಾದರು. ಪರಿಸರ ಸಂರಕ್ಷಣೆ ಮತ್ತು ವನ್ಯಜೀವಿ ಸಂರಕ್ಷಣೆಗೆ ಸಂಬಂಧಿಸಿದ ಹಲವಾರು ಉಪಕ್ರಮಗಳು 2025 ಅನ್ನು ಗುರುತಿಸಿವೆ. ಭಾರತದಲ್ಲಿ ಚಿರತೆಗಳ ಸಂಖ್ಯೆ ಈಗ 30 ದಾಟಿದೆ" ಎಂದು ಅವರು ಹೇಳಿದ್ದಾರೆ. ಮಹಾಕುಂಭ ಯಶಸ್ಸು

ಮಹಾಕುಂಭ ಮೇಳ ಆಯೋಜನೆ ಮತ್ತು ರಾಮ ಮಂದಿರದಲ್ಲಿ ಧ್ವಜಾರೋಹಣ ಸೇರಿದಂತೆ ಭಾರತಕ್ಕೆ 2025 ರ ಸಾಂಸ್ಕೃತಿಕ ಮಹತ್ವವನ್ನು ಜಗತ್ತಿನ ಮುಂದೆ ಸಾರಿವೆ ಎಂದು ತಿಳಿಸಿದ್ದಾರೆ "2025 ರಲ್ಲಿ ನಂಬಿಕೆ, ಸಂಸ್ಕೃತಿ ಮತ್ತು ಭಾರತದ ವಿಶಿಷ್ಟ ಪರಂಪರೆ ಎಲ್ಲವನ್ನೂ ಒಟ್ಟಿಗೆ ನೋಡಲಾಯಿತು. ವರ್ಷದ ಆರಂಭದಲ್ಲಿ ಪ್ರಯಾಗ್‌ರಾಜ್ ಮಹಾಕುಂಭದ ಆಯೋಜನೆಯು ಇಡೀ ಜಗತ್ತನ್ನು ಬೆರಗುಗೊಳಿಸಿತು. ವರ್ಷದ ಕೊನೆಯಲ್ಲಿ, ಅಯೋಧ್ಯೆಯ ರಾಮ ಮಂದಿರದಲ್ಲಿ ಧ್ವಜಾರೋಹಣ ಸಮಾರಂಭವು ಪ್ರತಿಯೊಬ್ಬ ಭಾರತೀಯನಲ್ಲೂ ಹೆಮ್ಮೆಯನ್ನು ತುಂಬಿತು" ಎಂದು ಅವರು ಹೇಳಿದ್ದಾರೆ

'ಯುವ ನಾಯಕರ ಸಂವಾದ'–ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯ ಅಂಗವಾಗಿ ಜನವರಿ 12 ಅನ್ನು ರಾಷ್ಟ್ರೀಯ ಯುವ ದಿನವನ್ನಾಗಿ ಆಚರಿಸಲಾಗುತ್ತುದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆಆ ದಿನದಂದು 'ಯುವ ನಾಯಕರ ಸಂವಾದ'ವನ್ನು ಸಹ ಆಯೋಜಿಸಲಾಗುವುದು ಮತ್ತು ಜನರು ತಮ್ಮ ಆಲೋಚನೆಗಳನ್ನು ಕಳುಹಿಸಬಹುದಾದ ಸ್ಥಳದಲ್ಲಿ ತಾವು ಭಾಗವಹಿಸುವುದಾಗಿ ಅವರು ಹೇಳಿದರು.ವಿಕ್ಷಿತ್ ಭಾರತ್ ಯುವ ನಾಯಕರ ಸಂವಾದ'ಮುಂದಿನ ತಿಂಗಳು 12 ರಂದು ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯಂದು 'ರಾಷ್ಟ್ರೀಯ ಯುವ ದಿನ' ಆಚರಿಸಲಾಗುವುದು. ಆ ದಿನದಂದು 'ಯುವ ನಾಯಕರ ಸಂವಾದ'ವನ್ನು ಸಹ ಆಯೋಜಿಸಲಾಗುವುದು, ಮತ್ತು ಖಂಡಿತವಾಗಿಯೂ ಅದರಲ್ಲಿ ಭಾಗವಹಿಸುತ್ತೇನೆ ಎಂದು ತಿಳಿಸಿದ್ದಾರೆ

ದುಬೈನಲ್ಲಿ ಕನ್ನಡ ಶಾಲೆ ಪ್ರಸ್ತಾಪ–2025ನೇ ಸಾಲಿನ ಕೊನೆಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ದುಬೈನ 'ಕನ್ನಡ ಪಾಠ ಶಾಲೆ' ಬಗ್ಗೆ ಉಲ್ಲೇಖಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಮಕ್ಕಳು ಟೆಕ್‌ವರ್ಲ್ಡ್‌ನಲ್ಲಿ ಪ್ರಗತಿ ಹೊಂದುತ್ತಿದ್ದಾರೆ. ಆದರೆ ಅವರು ತನೆಲದ ಭಾಷೆಯಾದ ಕನ್ನಡದಿಂದ ದೂರ ಆಗುತ್ತಿದ್ದಾರೆ ಎಂಬ ಉದ್ದೇಶದಿಂದ ದುಬೈನಲ್ಲಿ ಕನ್ನಡ ಪಾಠ ಶಾಲೆ ಆರಂಭವಾಗಿದ್ದು ಆ ಮೂಲಕ ದುಬೈ ಕನ್ನಡಿಗರ ಕನ್ನಡ ಭಾಷಾ ಪ್ರೇಮವನ್ನು ಶ್ಲಾಘಸಿದ್ದಾರೆ.

ಕರ್ನಾಟಕದ ಹೊರಗಿನ ಅತಿದೊಡ್ಡ ಕನ್ನಡ ಭಾಷಾ ಶಾಲೆ ಆಗಿರುವ 'ಕನ್ನಡ ಪಾಠ ಶಾಲೆ' ದುಬೈನಲ್ಲಿ 2014ರಿಂದ ಕಾರ್ಯನಿರ್ವಹಿಸುತ್ತಿದೆ. ದುಬೈನಲ್ಲಿರುವ ಕನ್ನಡಿಗ ಮಕ್ಕಳಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಬೆಳೆಸುವ ಸದುದ್ದೇಶದಿಂದ ಈ ಶಾಲೆ ಕನ್ನಡಿಗರಿಂದಲೇ ಆರಂಭವಾಗಿದ್ದು, ವಾರಾಂತ್ಯಗಳಲ್ಲಿ ತರಗತಿಗಳು ನಡೆಯುತ್ತವೆ. ಸ್ವಯಂಸೇವಕ ಶಿಕ್ಷಕರು ಉಚಿತವಾಗಿ ಕನ್ನಡ ಕಲಿಸೋದು ಕೂಡ ಇದರ ವಿಶೇಷ. 'ಕನ್ನಡ ಮಿತ್ರರು' ಎಂಬ ಸಂಘಟನೆ ಈ ಶಾಲೆಯನ್ನು ನಡೆಸಿಕೊಂಡು ಬಂದಿದೆ ಎಂದಿದ್ದಾರೆ

## ನಿಗದಿತ ಅವಧಿಯೊಳಗೆ ಕಾಮಗಾರಿಗಳನ್ನು ಗುಣಮಟ್ಟದಲ್ಲಿ ಪೂರ್ಣಗೊಳಿಸಿ: ಎನ್.ಎಸ್.ಬೋಸರಾಜು



ಧೈರ್ಯದ ದಾರಿ

**ಮಾನ್ವಿ,ಡಿ.28–** ಪಟ್ಟಣದ ವಿವಿಧ ವಾರ್ಡಗಳಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಶನಿವಾರ ರಾತ್ರಿ ಪರಿಶೀಲಿಸಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿ ಮಾನ್ವಿ ಪಟ್ಟಣದಲ್ಲಿನ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆಗಾಗಿ ಕೈಗೊಳ್ಳಲಾದ ಅಮೃತ–2 ಯೋಜನೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಹಾಗೂ ಬೇಸಿಗೆಯಲ್ಲಿ ಪಟ್ಟಣದ ಜನರಿಗೆ ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳ್ಳಿಸಿ ಪಟ್ಟಣದ ಪ್ರತಿ ಮನೆಗೂ ಕೂಡ ಕುಡಿಯುವ ನೀರಿನ ಸಂಪರ್ಕ ನಳಗಳನ್ನು ಜೋಡಿಸುವುದಕ್ಕೆ ಕ್ರಮ ಕೈಗೊಳ್ಳುವುದಕ್ಕೆ ಗುತ್ತೆದಾರರಿಗೆ ಅಗತ್ಯ ಸೂಚನೆ ನೀಡುವಂತೆ ಕರ್ನಾಟಕ ಕುಡಿಯುವ ನೀರು ಸರಬರಾಜು ಮಂಡಳಿಯ ಅಧಿಕಾರಿ ಚೌಹಾಣ್ ರವರಿಗೆ ಸೂಚನೆ ನೀಡಿದರು ಹಾಗೂ ವಿವಿಧ ಇಲಾಖೆಯ ಪ್ರಗತಿ ಪರಿಶೀಲಿಸಿ ಅಗತ್ಯ ಸೂಚನೆ ಗಳನ್ನು ನೀಡಿದರು.

ಸಭೆಯಲ್ಲಿ ಶಾಸಕ ಹಂಪಯ್ಯನಾಯಕ, ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ. ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ ಹಾಗೂ ಲ್ಯಾಂಡ್ ಆರ್ಮಿ ಅಧಿಕಾರಿಗಳಾದ ಹನುಮಂತಪ್ಪ ಹಾಗೂ ದೇವರಾಜ್, ಕರ್ನಾಟಕ ಕುಡಿಯುವ ನೀರು ಸರಬರಾಜು ಮಂಡಳಿಯ ಅಧಿಕಾರಿ ಚೌಹಾಣ್, ನಯೋಪ್ರ ತಾ.ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ. ಅಂಬರೇಶಪ್ಪ ವಕೀಲರು, ಪುರಸಭೆಯ ಸದಸ್ಯರಾದ ಕಾಮೇಶ್ ಮಂದಕಲ್, ಅಮ್ಜದ್ ಖಾನ್, ಶೇಕ್ ಫಾರೀದ ಉಮ್ರಿ, ಎಸ್ .ಎಸ್. ಪಾಷಾ, ಮೌಲಾಲಿ ನಾಯ್ಕ್, ಎಂ.ಡಿ. ಮೆಹಮ್ಮದ್, ಹೆಚ್.ಪಿ.ಎಂ.ಬಾಷಾ, ಸಾಬೀರ್ ಹುಸೇನ್, ಮುಖಂಡರಾದ ಸತ್ತಾರ್ ಬಂಗ್ಲೆವಲೆ, ಜಯಪ್ರಕಾಶ್, ರಾಮಕೃಷ್ಣ, ಜಿಲಾನಿ ಖುರೇಶಿ, ಹಂಪಯ್ಯ ನಾಯಕ್ ಬೆಳಗಿನಪೇಟ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು

## ಡಿ.30ರಂದು ಆಗ್ರಹಿಸಿ ಡಿಡಿಪಿಐ ಕಚೇರಿಗೆ ಮುತ್ತಿಗೆ; ವಿಶ್ವಾರಾಧ್ಯ ದಿಮ್ಮೆ



**ಯಾದಗಿರಿ:ಡಿ.28:** ಅಕ್ರಮ ಅನಧಿಕೃತ ಶಾಲೆಗಳು ವಸತಿ ಶಾಲೆಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಡಿಸೆಂಬರ್ 30 ರಂದು ಡಿಡಿಪಿಐ ಕಚೇರಿಗೆ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ವಿಶ್ವಾರಾಧ್ಯ ದಿಮ್ಮೆ ತಿಳಿಸಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು ಈಗಾಗಲೇ ಹಲವು ಮನವಿ ಆಗ್ರಹ ಒತ್ತಾಯ ನಂತರ ಶಹಾಪೂರದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರೂ ಯಾವುದೇ ಕ್ರಮ ಕೈಗೊಳ್ಳದ ಶಿಕ್ಷಣ ಇಲಾಖೆ ವಿರುದ್ಧ ಮುತ್ತಿಗೆ ಹಾಕಲು ನಿರ್ಣಯಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಅನಧಿಕೃತ ಶಾಲೆಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ನವೆಂಬರ್ ತಿಂಗಳಲ್ಲಿ ರಸ್ತೆ ತಡೆ ಮಾಡಿದ್ದಲ್ಲದೇ ಡಿಸೆಂಬರ್ 10 ರಂದು ಶಹಾಪೂರದಲ್ಲಿ ಬಿಇಓ ಕಚೇರಿ ಎದುರು ಧರಣಿ ನಡೆಸಲಾಗಿತ್ತು ಆಗ ಲಿಖಿತ ರೂಪದಲ್ಲಿ ಭರವಸೆ ನೀಡಿದ ಅಧಿಕಾರಿಗಳು ಇದುವರೆಗೆ ಕ್ರಮ ಕೈಗೊಂಡಿಲ್ಲ ಎಂದು ಅವರು ದೂರಿದ್ದಾರೆ.

ತಕ್ಷಣ ಕ್ರಮ ಜರುಗಿಸದೇ ಇದ್ದಲ್ಲಿ ಡಿ. 30 ರಂದು ಮಂಗಳವಾರ ಡಿಡಿಪಿಐ ಕಚೇರಿಗೆ ನಕಸೇ ರಾಜ್ಯ ಪ್ರಧಾನ ಸಂಚಾಲಕ ಭೀಮಣ್ಣ ಶಖಾಪುರ ನೇತೃತ್ತದಲ್ಲಿ ಕಾರ್ಯಕರ್ತರೊಂದಿಗೆ ಮುತ್ತಿಗೆ ಹಾಕಲು ನಿರ್ಧರಿಸಲಾಗಿದೆ ಎಂದು ಅಮರದೀಪ ನಾಯಕ, ಭೀಮು ಪೂಜಾರಿ, ಶ್ರೀದೇವಿ ಕಟ್ಟಿಮನಿ, ಅಬ್ದುಲ್ ಅಜೀಜ್, ಚೆನ್ನಬಸವ ಕನಕ, ಅಬ್ದುಲ್ ಸಾಹುಕಾರ, ನರೇಂದ್ರ ಸೂರ್ಯವಂಶಿ, ಶರಣಪ್ಪ ಕುಂಬಾರ, ಸಿದ್ದು ಪಟ್ಟೇದಾರ, ಮಲ್ಲು ಕಲ್ಮನಿ, ಭೀಮಣ್ಣಗೌಡ, ವೆಂಟೇಶ ಪ್ಯಾಪ್ಲಿ ಅವರು ತಿಳಿಸಿದ್ದಾರೆ.

## ಅಂಗನವಾಡಿ ಕೇಂದ್ರದ ಸುತ್ತಮುತ್ತಲೂ ಚರಂಡಿ ನೀರು ನಿಲ್ಲದಂತೆ ಸೂಕ್ತ ವ್ಯವಸ್ಥೆ ಮಾಡಿ

ಗುರುಮಠಕಲ್:ಡಿ.28:ಆರೋಗ್ಯವೇ ಮಹಾ ಭಾಗ್ಯ ಅನ್ನುವ ಸೂಕ್ತಿಯಂತೆ ಪ್ರತಿ ಜೀವರಾಶಿಯು ಆನಂದವಾಗಿರಲು ಮುಖ್ಯವಾಗಿ ಬೇಕಾಗಿರುವುದು ಉತ್ತಮವಾದ ಆಹಾರದ ಜೊತೆಗೆ ಅಷ್ಟೇ ನಮ್ಮ ಸುತ್ತಮುತ್ತಲಿನ ಪರಿಸರವು ಕೂಡ ಸ್ವಚ್ಛತೆ ಇರಬೇಕು. ಇಂತಹ ಗ್ರಾಮಗಳ ಸ್ವಚ್ಚತೆಗೆ ಹಾಗೂ ಅಭಿವೃದ್ಧಿಗಾಗಿ ಸರಕಾರವು ಕೋಟಿಗಟ್ಟಲೆ ಹಣವನ್ನು ಖರ್ಚು ಮಾಡುತ್ತಲಿದೆ ಆದರೆ ಗುರುಮಠಕಲ್ ತಾಲೂಕಿನ ಗಾಜರಕೋಟ ಗ್ರಾಮದಲ್ಲಿ. ಮನೆಯಲ್ಲಿ ಬಳಸಿದ ನೀರು ಚರಂಡಿಗಳಿಂದ ನೀರು ಗ್ರಾಮದ ಹೊರಗಡೆ ಹೊಗುವದು ಬಿಟ್ಟು ಗ್ರಾಮದಲ್ಲಿಯೇ ನಿಂತು ಗ್ರಾಮವು ಸ್ವಚ್ಛತೆಯನ್ನು ಕಾಣದಂತಾಗಿದೆ. ಗ್ರಾಮದಲ್ಲಿ ತಮ್ಮ ಮನೆಯ ಮುಂದೆ ಹೆಣ್ಣು ಮಕ್ಕಳು ತಾವೆ ಸ್ವತಃ ಸಣ್ಣ ಚರಂಡಿಗಳ ಮೂಲಕ ಬಳಸಿದ ನೀರು ಹಾದುಹೊಗುವದನ್ನು ಅವರೆ ಕಯಿಂದ ತೆಗೆದು ಕೊಳ್ಳುವ ಪರಸ್ಥಿತಿ ಗ್ರಾಮದಲ್ಲಿ ಹರಡಿದೆ.

ಇನ್ನೊಂದು ಮುಖ್ಯವಾದ ವಿಷಯ ಹೆಳಬೇಕಾದರೆ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ಅಂಗನವಾಡಿ ಕೇಂದ್ರ–07ರಲ್ಲಿ, 3ರಿಂದ 6 ವರ್ಷದ ಒಳಗಿರುವ ಮಕ್ಕಳ ಸಂಖ್ಯೆ 22 ಇದ್ದು. ಮತ್ತು 0 ವರ್ಷದಿಂದ 3 ವರ್ಷದಳಗಿರುವ ಮಕ್ಕಳ ಸಂಖ್ಯೆ 40 ಇದ್ದು ಇವರ ಪಾಲಕ ಪೊ?ಷಕರು ಅಂಗನವಾಡಿ ಕೇಂದ್ರಕ್ಕೆ ಬರಲು ಗಬ್ಬು ನಾರುತ್ತಿರುವ ಹೊಲಸು ನೀರುನಿಂದ ದಾಟಿ ಕೇಂದ್ರದ ಹೊಳಗಡೆ ಬರಬೇಕು ಇಂತಹ ಪರಸ್ಥಿತಿ ಗ್ರಾಮದಲ್ಲಿ ಇದೆ. ಅಂಗನವಾಡಿ ಕೇಂದ್ರದ ಕಾರ್ಯಕರ್ತೆ ಶ್ರೀ ಮತಿ ಸುಧಾ ಅವರನ್ನು ವಿಷಯದ ಬಗ್ಗೆ ವಿಚಾರಿಸಿದಾಗ ದಿನಾಂಕ 04-12-2023 ರಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಮೂಲಕ ಜಿಲ್ಲಾ ಪಂಚಾಯುತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಿಗೂ ಹಾಗೂ ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳ ದಯಾಪರ ಮಾಹಿತಿಗಾಗಿ ಮನವಿ ಪತ್ರಸಲ್ಲಿಸಿ ಸ್ವಿಕೃತಿ ತೆಗೆದು ಕೊಂಡಿರುವುದು ಇದೆ ಹಾಗೂ ದಿನಾಂಕ 22-12-2025 ರಂದು ಅಂಗನವಾಡಿ ಕೇಂದ್ರದ ಸುತ್ತ ಮುತ್ತಲು ಸ್ವಚ್ಛತೆ ಮಾಡುವ ಕುರಿತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಕೂಡ ಯಾವುದೆ ಪ್ರಯೋಜನೆಯಾಗಿಲ್ಲ. ಇದರಿಂದ ಮಕ್ಕಳು ಅಂಗನವಾಡಿ ಕೇಂದ್ರದ ಮುಂದೆ ಮಕಳಿಗೆ ಚಟುವಟಿಕೆಗಳನ್ನು ನಡೆಸಲು



ತೊಂದರೆಯಾಗುತ್ತಿದೆ ಮತ್ತು ಗಬ್ಬು ನಾರತ್ತಿರುವ ನೀರಿನ ವಾಸನೆಯಿಂದ ಮಕ್ಕಳು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಹಾಗುತ್ತಿಲ್ಲ. ಆದುದರಿಂದ ಅಂಗನವಾಡಿ ಕೇಂದ್ರದ ಸುತ್ತಮುತ್ತಲು ಚರಂಡಿಗಳ ನೀರು ಸಂಗ್ರಹವಾಗದಂತೆ ಸೂಕ್ತ ವೆವಸ್ಥೆಮಾಡಿಸಲು ಗ್ರಾಮದ ಮುಖಂಡರು ಹೇಳಿದರು. ಈ ವೇಳೆ ಚನ್ನಬಸಪ್ಪ ಕೋಟಗಿರಿ, ನರಸಪ್ಪ ಕೋಟಗಿರಿ, ಕಾಶಪ್ಪ ಸುಂಕರ್, ಕಾಶಪ್ಪ ಸುಂಕರ್ ಬಸವರಾಜ ಅರುಣಿ ಹಾಗೂ ಗ್ರಾಮಸ್ಥರು ಇದ್ದರು.

## ಪ್ರಬಂಧ ಸ್ಪರ್ಧೆ ರಾಜ್ಯಮಟ್ಟಕ್ಕೆ ಆಯ್ಕೆ



**ಬಳ್ಳಾರಿ, ಡಿ.28:** ನಗರದ ಸರ್ಕಾರಿ ಮಾಜಿ ಪುರಸಭೆ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಜಿಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು ಈ ಸ್ಪರ್ಧೆಯಲ್ಲಿ ಬಳ್ಳಾರಿ ಜಿಲ್ಲೆಯ ಐದು ತಾಲೂಕಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು . ಸರ್ಕಾರಿ ಮಾಜಿ ಪುರಸಭೆ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಕಲಾವಿಭಾಗದ ವಿದ್ಯಾರ್ಥಿಯಾದ ಮಹಾಂತೇಶ್ ರವರು ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆ ಆಗಿರುತ್ತಾರೆ. ಈ ವಿದ್ಯಾರ್ಥಿಗೆ ರಾಜ್ಯಶಾಸ್ತ್ರದ ಉಪನ್ಯಾಸಕರಾದ ನಾಗರೆಡ್ಡಿ ಕೆ ವಿ ಮತ್ತು ಪ್ರಾಚಾರ್ಯರಾದ ಕೆ. ಸುಂಕಪ್ಪ ಮತ್ತು ಸಿಬ್ಬಂದಿ ವರ್ಗವು ಅಭಿನಂದನೆಯನ್ನು ಸಲ್ಲಿಸುತ್ತದೆ ಹಾಗೂ ರಾಜ್ಯಮಟ್ಟದಲ್ಲಿ ಉತ್ತಮ ಫಲಿತಾಂಶ ಬರಲಿ ಎಂದು ಆಶಿಸಿರುತ್ತಾರೆ

# ಮೂಲಭೂತ ಸೌಕರ್ಯಕ್ಕೆ ಆದ್ಯತೆ: ಜನಾರ್ದನರೆಡ್ಡಿ

**ಗಂಗಾವತಿ, ಡಿ.28:** ನಗರದ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾಗಿರುವ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಆದ್ಯತೆ ನೀಡಲಾಗುವುದು ಎಂದು ಶಾಸಕರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಗಾಲಿ ಜನಾರ್ದನರೆಡ್ಡಿ ಹೇಳಿದರು.

ಕಾಲೇಜಿಗೆ ಶುಕ್ರವಾರ ಭೇಟಿ ನೀಡಿದ ಅವರು, ವಿದ್ಯಾರ್ಥಿಗಳಿಗೆ ಅಗತ್ಯವಿರುವ ಕುಡಿಯುವ ನೀರಿನ ಸೌಕರ್ಯ, ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯ ಕಲ್ಪಿಸಲು ಒತ್ತು ನೀಡಲಾಗುವುದು. ಜಿಲ್ಲೆಯಲ್ಲಿ ಇರುವ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಸ್ಕೆಎನ್ಜಿ ಕಾಲೇಜು ಬೃಹತ್ ಸಂಖ್ಯೆಯ ವಿದ್ಯಾರ್ಥಿಗಳನ್ನು ಹೊಂದಿದ್ದು, ಅವರ ಆಶೋತ್ತರಗಳಿಗೆ ಸ್ಪಂದಿಸಲಾಗುವುದು ಎಂದರು.



ಕಾಲೇಜು ಅಭಿವೃದ್ಧಿ ಸಮಿತಿಯ ನೂತನ ಸದಸ್ಯರನ್ನು ಕಾಲೇಜಿನ ಪ್ರಾಚಾರ್ಯ ಡಾ. ಶಿವರಾಜ ಗುರಿಕಾರ ಸ್ವಾಗತಿಸಿದರು. ಬೋಧಕ–ಬೋಧಕೇತರ ಸಿಬ್ಬಂದಿ ಅತಿಥಿಗಳನ್ನು ಗೌರವಿಸಿದರು.

ಈ ವೇಳೆ ಮುಖಂಡರಾದ ಯಮನೂರಪ್ಪ ಚೌಡ್ಕಿ, ಡಿ.ಕೆ. ಅಗೋಲಿ, ಚಂದ್ರು ಹೇರೂರು, ಯಮನೂರಪ್ಪ, ಕಾಲೇಜು ಅಭಿವೃದ್ಧಿ ಸಮಿತಿ ನಾಮನಿರ್ದೇಶಿತ ಸದಸ್ಯರಾದ ಸೋಮಶೇಖರ ಕಂಪ್ಲಿ, ವನಜಾಕ್ಷಿ ಬಸವರಾಜ ಹಿರೂರು, ರಮೇಶ್ ಹೊಸಮನಿ ಜಂತಕಲ್, ರವಿ ಯಲಬುರ್ತಿ, ದೀಪಕ್ ಬಾಂಟ್ಯಾ, ವೀರೇಶ್ ಬಲಕುಂದಿ, ರಾಜೇಶ್ ಬಸವನದುರ್ಗ, ರಾಘು ವೆಂಕಟಗಿರಿ, ಆನಂದಗೌಡ, ಆಸೀಫ್ ಬಿಚ್ಚುಗತ್ತಿ, ಸುಧಾ ಮಂಜುನಾಥ ಬಸಾಪಟ್ಟಣ, ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಕೃಷ್ಣ, ಕನ್ನಡ ವಿಭಾಗದ ಮುಖ್ಯಸ್ಥರಾದ ಮುಮ್ತಾಜ್ ಬೇಗಂ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಅಕ್ಕಿ ಮಾರುತಿ, ರಾಜ್ಯಶಾಸ್ತ್ರ ವಿಭಾಗದ ಮಂಜುನಾಥ ಕೆ.ಎಚ್, ನಿರ್ವಹಣಾಶಾಸ್ತ್ರದ ಅನಿಲ್, ಅನಿತಾ, ಅಶ್ರಫ್, ದೈಹಿಕ ಶಿಕ್ಷಣದ ಅನಿಲ್, ಕನ್ನಡ ವಿಭಾಗದ ಪವನ್ಕುಮಾರ್ ಗುಂಡೂರು, ಶಾಮಿದ್ ಸಾಬ್, ಪ್ರತಿಭಾ, ವೀರೇಶ್, ದುರ್ಗೇಶ್ ಸೇರಿದಂತೆ ಇತರರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE